# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 152 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 03–01–2025 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 152 | RNI No: KARKAN/2023/88462 | KA/SK/CTA-874/2024-2026 | Chitradurga | Date: 03-01-2025 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ವಿಕಲಚೇತನರನ್ನು ಅಲೆದಾಡಿಸಿದರೆ ದೂರು ನೀಡಿ: ಜಿಲ್ಲಾಧಿಕಾರಿ 2

ಮಾರಕ ರೋಗಗಳ ವಿರುದ್ಧ ಲಸಿಕೆ ಕೊಡಿಸಿ, ನಿಮ್ಮ ಮಕ್ಕಳನ್ನು ರಕ್ಷಿಸಿ 3

ಮಹಾತ್ಮ ಗಾಂಧಿ ಬಾಬಾ ಸಾಹೇಬ್ ಅಂಬೇಡ್ಕರ್ ವಿಶ್ವ ಗುರು ಭಾರತ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಪೂರ್ವಭಾವಿ ಸಭೆ

» ಚಿತ್ರದುರ್ಗ

ನಗರದ ಕಬೀರಾನಂದ ನಗರದಲ್ಲಿನ ಶ್ರೀ ಸದ್ಗುರು ಕಬೀರಾನಂದಾಶ್ರಮದಲ್ಲಿ ಫೆಬ್ರವರಿಯಲ್ಲಿ ನಡೆಯಲಿರುವ 95ನೇ ಶಿವನಾಮ ಸಪ್ತಾಹದ ಅಂಗವಾಗಿ ಜ.4 ರಂದು ಪೂರ್ವಭಾವಿ ಸಭೆ ಕರೆಯಲಾಗಿದೆ ಎಂದು ಶ್ರೀ ಗುರು ಕಬೀರಾನಂದಾಶ್ರಮದ ಕಾರ್ಯದರ್ಶಿ ವಿ.ಎಲ್.ಪ್ರಶಾಂತ್ ತಿಳಿಸಿದ್ದಾರೆ. ಮಧ್ಯಾಹ್ನ 4.30ಕ್ಕೆ ಶ್ರೀ ಸದ್ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳ ದಿವ್ಯ ಸಾನಿಧ್ಯದಲ್ಲಿ ಪೂರ್ವ ಭಾವಿ ಸಭೆ ಕರೆಯಲಾಗಿದೆ. ಈ ಸಭೆಗೆ ಸರ್ವ ಭಕ್ತಾಧಿಗಳು ಆಗಮಿಸುವುದರ ಮೂಲಕ ಶಿವನಾಮ ಸಪ್ತಾಹ ಯಶಸ್ವಿಗೆ ಸಲಹೆ ಸಹಕಾರವನ್ನು ನೀಡುವಂತೆ ಪ್ರಶಾಂತ್ ಮನವಿ ಮಾಡಿದ್ದಾರೆ.

### ನಾಮಪತ್ರ ಸಲ್ಲಿಕೆ

» ಚಿತ್ರದುರ್ಗ

ಚಿತ್ರದುರ್ಗ ನಗರದ ಚಿತ್ರದುರ್ಗ ತಾಲ್ಲೂಕು ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ನಿಯಮಿತಕ್ಕೆ 2025–2030 ನೇ ಸಾಲಿಗೆ ನಿರ್ದೇಶಕ ಸ್ಥಾನಕ್ಕೆ ಚುನಾವಣೆಯನ್ನು ಘೋಷಣೆ ಮಾಡಲಾಗಿದ್ದು, ಗುರುವಾರ ಸಾಲಗಾರರಲ್ಲದೆ ಕ್ಷೇತ್ರಕ್ಕೆ ಜಾಲಿಕಟ್ಟೆಯ ಸಿ ರುದ್ರಪ್ಪ ಹಾಗೂ ಸಾಲಗಾರರ ಕ್ಷೇತ್ರದಿಂದ ಎಂ.ಶಶಿಧರ್ ನಾಮಪತ್ರವನ್ನು ಸಲ್ಲಿಸಿದರು. ಈ ಬ್ಯಾಂಕ್‌ನಲ್ಲಿ ಸಾಲಗಾರರ ಕ್ಷೇತ್ರದಿಂದ 14 ಜನರ ನಿರ್ದೇಶಕ ಸ್ಥಾನಕ್ಕೆ ಚುನಾವಣೆ ಘೋಷಣೆಯಾಗಿದ್ದು, ಇದರಲ್ಲಿ ಸಾಮಾನ್ಯ ಕ್ಷೇತ್ರದಲ್ಲಿ 7, ಪರಿಶಿಷ್ಟ ಜಾತಿ ಮೀಸಲು ಸ್ಥಾನಕ್ಕೆ 1, ಪರಿಶಿಷ್ಠ ಪಂಗಡದ ಮಿಸಲು ಸ್ಥಾನ 1ಕ್ಕೆ ಮಹಿಳಾ ಮೀಸಲು ಸ್ಥಾನ 2 ಹಿಂದುಳಿದ ವರ್ಗ ಪ್ರವರ್ಗ ಎ ಮೀಸಲು ಸ್ಥಾನ 1ಕ್ಕೆ ಹಿಂದುಳಿದ ವರ್ಗ ಪ್ರವರ್ಗ ಬಿ ಮೀಸಲು ಸ್ಥಾನ 1 ಕ್ಕೆ ಹಾಗೂ ಸಾಲಗಾರರಲ್ಲದ ಕ್ಷೇತ್ರಕ್ಕೆ 1 ಸ್ಥಾನಕ್ಕೆ ಚುನಾವಣೆ ನಡೆಯಲಿದೆ. ಸಾಲಗಾರ ಕ್ಷೇತ್ರದಲ್ಲಿ ಕಸಬಾ ಹೋಬಳಿಯಲ್ಲಿ 5, ಭರಮಸಾಗರ ಹೋಬಳಿಯಲ್ಲಿ 3 ತುರುವನೂರು ಹೋಬಳಿ 3 ಹಿರೇಗುಂಟನೂರು ಹೋಬಳಿಯಲ್ಲಿ 2 ಹಾಗೂ ಸಾಲಗಾರರಲ್ಲದೆ ಕ್ಷೇತ್ರಕ್ಕೆ ಚಿತ್ರದುರ್ಗ ತಾಲ್ಲೂಕು ಪೂರ್ಣವಾಗಿದ್ದು ಇದಕ್ಕೆ 1 ಸ್ಥಾನವನ್ನು ನೀಡಲಾಗಿದೆ, ಇದಕ್ಕೆಲ್ಲಾ ಪೂರ್ಣವಾಗಿ 369 ಮತದಾರರಿದ್ದಾರೆ. ಈ ಚುನಾವಣೆಗೆ ನಾಮಪತ್ರ ಸಲ್ಲಿಸುವ ಪ್ರಕ್ರಿಯೇ ಈಗಾಗಲೇ ಪ್ರಾರಂಭವಾಗಿದ್ದು, ಜ. 4ರವರೆಗೆ ನಾಮಪತ್ರ ಸಲ್ಲಿಸಬಹುದಾಗಿದೆ. ಜ.5 ರಂದು ನಾಮಪತ್ರಗಳ ಪರಿಶೀಲನೆ ಕಾರ್ಯ ನಡೆಯಲಿದ್ದು, ಜ.6 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ. ಜ.8 ರಂದು ಮಾದರಿ ಮತ ಪತ್ರ ಪ್ರಕಟಣೆ, ಜ. 12 ರಂದು ಬೆಳಿಗ್ಗ 9 ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದ್ದು ಚುನಾವಣೆ ಮುಗಿದ ನಂತರ ಮತಗಳ ಎಣಿಕೆ ಕಾರ್ಯ ನಡೆದು ಫಲಿತಾಂಶವನ್ನು ಘೋಷಿಸಲಾಗುವುದು. ಈ ಸಂದರ್ಭದಲ್ಲಿ ಶಶಿಧರ್, ಶಿವಾನಂದ, ನಾಗರಾಜ್, ಲಿಂಗಬಸಪ್ಪ ಹಾಜರಿದ್ದರು.

### ಚಳ್ಳಕೆರೆ ವೃತ್ತಠಾಣಾ ವ್ಯಾಪ್ತಿಯಲ್ಲಿ 623 ವಿವಿಧ ಪ್ರಕರಣಗಳು ದಾಖಲು




» ಚಳ್ಳಕೆರೆ

ಚಳ್ಳಕೆರೆ ನಗರದ ಠಾಣಾ ವ್ಯಾಪ್ತಿಯಲ್ಲಿ ಅಪಘಾತಗಳು ಸೇರಿದಂತೆ ವಿವಿಧ ಪ್ರಕರಣಗಳು ನಿರಂತರ ದಾಖಲಾಗುತ್ತಿದ್ದು, ಕಳೆದ 2024ನೇ ಸಾಲಿನಲ್ಲಿ (1–1–2024ರಿಂದ31–12–2024) ಅತಿಹೆಚ್ಚು ಪ್ರಕರಣಗಳು ದಾಖಲಾಗಿವೆ. ಕಳೆದ 2024ರಲ್ಲಿ ಒಟ್ಟು 623ವಿವಿಧ ಪ್ರಕರಣಗಳು ದಾಖಲಾಗಿ ಚಳ್ಳಕೆರೆ ನಗರ ವೃತ್ತ ಠಾಣಾ ವ್ಯಾಪ್ತಿಯಲ್ಲಿ ಹೆಚ್ಚುವರಿಯಾಗಿ ಗ್ರಾಮೀಣ ಭಾಗದ ಪೊಲೀಸ್ ಠಾಣೆ ಸ್ಥಾಪಿಸುವಲ್ಲಿ ಇಲಾಖೆ ಗಮಹರಿಸಬೇಕಿದೆ. 623 ಪ್ರಕರಣಗಳು 76 ಅಸ್ವಾಭಾವಿಕ ಪ್ರಕರಣಗಳು ದಾಖಲಾಗಿವೆ. ಗ್ರಾಮೀಣ ಭಾಗದ ಪೊಲೀಸ್ ಠಾಣೆ ಆರಂಭವಾದರೆ ನಗರ ಠಾಣಾ ವ್ಯಾಪ್ತಿಯಲ್ಲಿ ಇನ್ನೂ ಹೆಚ್ಚಿನ ಕಾರ್ಯವನ್ನು ಪೊಲೀಸರು ಮಾಡಬಹುದಾಗಿದೆ. ಈ ನಿಟ್ಟಿನಲ್ಲಿ ಗೃಹ ಇಲಾಖೆ ತುರ್ತು ಗಮನಹರಿಸಬೇಕೆಂದು ರೈತ ಸಂಘದ ಹಿರಿಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಮನವಿ ಮಾಡಿದ್ದಾರೆ.

# ನಾಳೆ ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಆಗ್ರಹಿಸಿ ಕಲಬುರ್ಗಿಯಲ್ಲಿ ಬೃಹತ್ ಪ್ರತಿಭಟನೆ




» ಚಿತ್ರದುರ್ಗ

ರಾಜ್ಯದಲ್ಲಿ ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ಸಂವಿಧಾನದ ಆಶಯದಂತೆ ಆಡಳಿತ ನಡೆಯುತ್ತಿಲ್ಲ.ಅಧಿಕಾರಿಗಳುಗುತ್ತಿಗೆದಾರರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಸಿದ್ದರಾಮಯ್ಯ ಅವರೇ ಹಗರಣಗಳಲ್ಲಿ ಸಿಲುಕಿದ್ದಾರೆ. ಆದರೂ ಕೂಡ ಬಂಡತನದಿಂದ ಏನು ಆಗಿಲ್ಲ ಅನ್ನುವ ರೀತಿಯಲ್ಲಿ ವರ್ತನೆ ಮಾಡುತ್ತಿದ್ದಾರೆ ಎಂದು ಮಾಜಿ ಉಪ ಮುಖ್ಯಮಂತ್ರಿಗಳು ಹಾಗೂ ಸಂಸದರಾದ ಗೋವಿಂದ ಕಾರಜೋಳ ಸಿದ್ದರಾಮಯ್ಯ ವಿರುದ್ದ ಗುಡುಗಿದ್ದಾರೆ.

ಚಿತ್ರದುರ್ಗ ನಗರದ ಬಿಜೆಪಿ ಕಚೇರಿಯಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಚಿನ್ ಆತ್ಮಹತ್ಯೆ ಮಾಡಿಕೊಂಡಿದ್ದು, ಸ್ಪಷ್ಟವಾಗಿ ಕಾಣುತ್ತದೆ. ಖರ್ಗೆ ಬಂಟರು ಆತ್ಮಹತ್ಯೆಗೆ ಕಾರಣ ಆಗಿದ್ದಾರೆ. 5% ಹಣ ಕೊಡಿ ನಾವು ಟೆಂಡರ್ ಮಾಡಿಕೊಡುತೇವೆ ಎಂದು ಕಿರುಕುಳ ಕೊಟ್ಟಿದ್ದರಿಂದ ಸಚಿನ್ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬಂಡತನದಿಂದ ಯಾರು ಸೇರಿಕೊಂಡಿಲ್ಲ ಎಂದು ತಾತ್ಸರದ ಉತ್ತರ ಕೊಡುತ್ತಾರೆ ಇವರಿಗೆ ಅಧಿಕಾರ ನಡೆಸುವ ನೈತಿಕತೆ ಇಲ್ಲ ಎಂಬುದು.ಪಾರದರ್ಶಕ ನಿಸ್ಪಕ್ಷಪಾತವಾಗಿ ತನಿಖೆ ನಡೆಯಲು ರಾಜೀನಾಮೆ ಪಡೆಯಬೇಕಿತ್ತು. ಆದರೆ ಅದ್ಯಾವುದನ್ನು ಮಾಡಿಲ್ಲ. ಅಧಿಕಾರವನ್ನು ನಡೆಸುತ್ತಿದ್ದಾರೆ.

ಬಿಜೆಪಿಯವರು ಹಗರಣಗಳ ಬಗ್ಗೆ ಮಾತನಾಡಿದರೆ ದ್ವೇಷ್ದ ರಾಜಕಾರಣ ಎಂದು ಹೇಳುತ್ತಾರೆ ಹೊರತು ಯಾವುದೇ ಕ್ರಮ ಕೈಗೊಂಡಿಲ್ಲ. ಕಲುಬುರ್ಗಿಯಲ್ಲಿ ಬೃಹತ್ ಹೋರಾಟ ಮಾಡಲಿದ್ದಾವೆ. ಪೊಲೀಸರು ಕಾನೂನು ರೀತಿಕೆಲಸ ಮಾಡುತ್ತಿಲ್ಲ. ಕಾಂಗ್ರೇಸ್ ನಾಯಕರು ಮುಖಂಡರು ಹೇಳಿದಂತೆ ಕೆಲಸ ಮಾಡುತ್ತಿದ್ದಾರೆ. ಸರಿಯಾಗಿ ತನಿಖೆ ಮಾಡುತ್ತಿಲ್ಲ.ಆದ್ದರಿಂದ ಸಿದ್ದರಾಮಯ್ಯ ಅವರೆ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ಮತ್ತು ಸಿಬಿಐ ಗೆ ತನಿಖೆ ವಹಿಸಬೇಕು ಎಂದು ಒತ್ತಾಯಿಸಿದರು.ಸಿದ್ದರಾಮಯ್ಯನವರು ಸ್ವತಹ ಹಗರಣದಲ್ಲಿ ಸಿಲುಕಿಕೊಂಡಿದ್ದಾರೆ.. ಅಷ್ಟೇ ಅಲ್ಲದೆ ಸಿದ್ದರಾಮಯ್ಯನವರು ಸರ್ಕಾರದಲ್ಲಿನ ಹಲವು ಮಂತ್ರಿಗಳು ಹಗರಣದಲ್ಲಿ ಸಿಲುಕಿಕೊಂಡಿದ್ದಾರೆ.. ಆದರೂ ಸಹ ಏನು ಆಗಿಲ್ಲ ಅನ್ನುವ ಭಂಡತನ ವರ್ತನೆ ಮಾಡುತ್ತಿದ್ದಾರೆ. ಕೆಲವೇ ದಿನಗಳ ಹಿಂದೆ ಬೀದರ್ ಜಿಲ್ಲೆಯ ಭಾಲ್ಕಿ ತಾಲ್ಲೂಕಿನ ಗುತ್ತಿಗೆದಾರ ಸಚಿನ್ ಪಾಂಚಾಳರವರು ಆತ್ಮಹತ್ಯೆ ಪ್ರಕರಣವು ರಾಜ್ಯ ಮಾತ್ರವಲ್ಲ..ದೇಶಾದ್ಯಂತ ಸುದ್ದಿಯಾಗಿದೆ.ಅವರು ಬರೆದಿಟ್ಟ 7 ಪುಟಗಳ ಡೆತ್ ನೋಟಿನಲ್ಲಿ ಕಿರುಕುಳದ ಉಲ್ಲೇಖವಿದೆ... ಆತ್ಮಹತ್ಯೆ ಮಾಡಿಕೊಳ್ಳುವ ವ್ಯಕ್ತಿ ಬರೆದಿಟ್ಟ ಡೆತ್ ನೋಟಿನ ಮಾಹಿತಿ ಸತ್ಯಕ್ಕೆ ದೂರವಾಗುವ ಸಾಧ್ಯತೆ ಇಲ್ಲ.ರಾಜ್ಯದ ಕಾಂಗ್ರೆಸ್ ಸರಕಾರದ ಆಡಳಿತಾವಧಿಯಲ್ಲಿ ಸರಕಾರಿ ಪ್ರಾಯೋಜಿತ ಆತ್ಮಹತ್ಯೆಗಳು ಅಥವಾ ರಾಜ್ಯ ಸರಕಾರದ ಕುಮ್ಮಕ್ಕಿನ ಆತ್ಮಹತ್ಯೆ ಪ್ರಕರಣಗಳು ದಿನೇದಿನೇ ಹೆಚ್ಚಾಗುತ್ತಿದೆ... ಸರಕಾರ, ಸಚಿವರು, ಆಡಳಿತ ಪಕ್ಷದ ಶಾಸಕರ ಕುಮ್ಮಕ್ಕಿನಿಂದ ಹಿಂದೆಂದೂ ಇಂಥ ಸರಣಿ ಆತ್ಮಹತ್ಯೆ ಪ್ರಕರಣಗಳನ್ನು ಕೇಳಿರಲಿಲ್ಲ.ಟೆಂಡರ್ ಮಾಡಿಕೊಡಲು ಶೇ 5 ದುಡ್ಡಿನ ಬೇಡಿಕೆ ಇಟ್ಟಿರುತ್ತಾರೆ..ಪ್ರಿಯಾಂಕ್ ಖರ್ಗೆ ನಾನು ಹೇಳಿದ ಮಾತನ್ನು ಮೀರುವುದಿಲ್ಲ.. ಸಚಿವರ ಬೆಂಬಲ ಇದೆ ಎಂದು ರಾಜು ಕಪನೂರ್ ಹೇಳಿದ್ದಾಗಿ ಸಚಿನ್ ಡೆತ್ ನೋಟಿನಲ್ಲಿ ಬರೆದಿದ್ದಾರೆ.ಸಿದ್ದರಾಮಯ್ಯನವರು ಮುಖ್ಯಮಂತ್ರಿಯಾದ ಬಳಿಕ ರಾಜ್ಯ ಸರಕಾರವು ಕರ್ನಾಟಕ ರಾಜ್ಯಕ್ಕೆ ಆತ್ಮಹತ್ಯೆ ಭಾಗ್ಯವನ್ನು ದಯಪಾಲಿಸಿದೆ. ಭ್ರಷ್ಟಾಚಾರ ಬಯಲಾದುದರಿಂದ ವಾಲ್ಮೀಕಿ ನಿಗಮದ ಅಕೌಂಟೆಂಟ್ ಚಂದ್ರಶೇಖರ್ ಮೊದಲ ಆತ್ಮಹತ್ಯೆ ಮಾಡಿಕೊಂಡಿದ್ದು.. ಬಿಜೆಪಿ ಹೋರಾಟದಿಂದ ಸಚಿವ ನಾಗೇಂದ್ರ ರಾಜೀನಾಮೆ ಕೊಟ್ಟಿದ್ದರು.ಲಕ್ಷ್ಮಿ ಹೆಬ್ಬಾಳ್ಕರ್ ಪಿ.ಎ. ಹೆಸರು ಬರೆದಿಟ್ಟು ರುದ್ರಣ್ಣ ಯಡವಣ್ಣವರ್ ಆತ್ಮಹತ್ಯೆ ಮಾಡಿಕೊಂಡಿದ್ದರು. ದಾವಣಗೆರೆಯಲ್ಲಿ ಗುತ್ತಿಗೆದಾರರೊಬ್ಬರು ಬಾಕಿ ಹಣ ಸಿಗದೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಾಗಡಿಯಲ್ಲಿ ಕ್ರಷರ್ ಲಾರಿ ಮಾಲೀಕರೊಬ್ಬರು ಲಂಚ ಕೊಡಲಾಗದೆ ಆತ್ಮಹತ್ಯೆಮಾಡಿಕೊಂಡಿದ್ದಾರೆ...ಯಾದಗಿರಿ ಪಿಎಸ್‌ಐ ಪರಶುರಾಮ, ಸ್ಥಳೀಯ ಶಾಸಕರ ಪುತ್ರನ ಒತ್ತಡ ತಡೆಯಲಾಗದೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.ಹಿಂದೂ ಸಮಾಜದ ಸಿದ್ಧಲಿಂಗ ಸ್ವಾಮೀಜಿ, ಶಾಸಕ ಬಸವರಾಜ ಮತ್ತಿಮೂಡ, ಕಲಬುರ್ಗಿಯ ಬಿಜೆಪಿ ನಾಯಕರಾದ ಚಂದುಪಾಟೀಲ, ಮಣಿಕಂಠ ರಾಠೋಡ್ ರವರ ಕೊಲೆಗೆ ಸಂಚು ರೂಪಿಸಿದ್ದಾಗಿ ಡೆತ್‌ನೋಟ್‌ನಲ್ಲಿ ತಿಳಿಸಿದ್ದಾರೆ.ಸಿದ್ದಲಿಂಗ ಸ್ವಾಮೀಜಿ ರವರ ಧ್ವನಿ ಅಡಗಿಸಲು ಮಹಾರಾಷ್ಟ್ರದ ಸುಪಾರಿ ಕಿಲ್ಲರ್ ಗಳನ್ನು ಬಳಸುವ ವಿಚಾರವೂ ಡೆತ್ ನೋಟಿನಲ್ಲಿದೆ... ಹಾಗಾಗಿ ಇದೊಂದು ಗಂಭೀರ ವಿಚಾರ... ಆದ್ದರಿಂದ ಇದನ್ನು ಸಿಬಿಐ ತನಿಖೆಗೆ ವಹಿಸಬೇಕೆಂದು ಆಗ್ರಹಿಸುತ್ತೇವೆ..ರಾಜ್ಯದ ಪೊಲೀಸ್ ಇಲಾಖೆಯಿಂದ ಅತ್ಯಂತ ಶಕ್ತಿಶಾಲಿ ಖರ್ಗೆ ಕುಟುಂಬದ ವಿರುದ್ಧ ತನಿಖೆ ಮಾಡಲು ಸಾಧ್ಯವಿಲ್ಲ.ಹಿಂದೆ ಇದೇ ಸರ್ಕಾರದ ಸಚಿವರಾದ ನಾಗೇಂದ್ರರವರೂ ವಾಲ್ಮೀಕಿ ನಿಗಮದ ಹಗರಣದಲ್ಲಿ ಸಿಲುಕಿ ರಾಜೀನಾಮೆ ಕೊಟ್ಟಿದ್ದಾರೆ... ಮುಖ್ಯಮಂತ್ರಿ ಸಿದ್ದರಾಮಯ್ಯನವರು ಒಂದು ಕ್ಷಣವೂ ತಡ ಮಾಡದೇ ಪ್ರಿಯಾಂಕ ಖರ್ಗೆಯವರ ರಾಜೀನಾಮೆ ಪಡೆದುಕೊಳ್ಳಬೇಕು.. ಯಾವುದೋ ನೆಪ ಮಾಡಿ ರಕ್ಷಿಸುವ ದುಸ್ಸಾಹಸ ಮಾಡುವುದು ಬೇಡ.ಪ್ರಿಯಾಂಕ ಖರ್ಗೆಯವರಿಗೆ ಮರೆವು ಜಾಸ್ತಿ...ಹಿಂದೆ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಈಶ್ವರಪ್ಪರವರ ಮೇಲೆ ಆರೋಪ ಬಂದಾಗ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ಕೊಟ್ಟಿದ್ದನ್ನು ಪ್ರಿಯಾಂಕ ಖರ್ಗೆ ಮರೆಯಬಾರದು.ಪ್ರಿಯಾಂಕ ಖರ್ಗೆ, ಲಕ್ಷ್ಮಿ ಹೆಬ್ಬಾಳ್ಕರ್ ಅಷ್ಟೇ ಅಲ್ಲದೇ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯರವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಿ ನಿಷ್ಪಕ್ಷಪಾತ ತನಿಖೆಗೆ ಸಹಕರಿಸಬೇಕು ಎಂದು ಆಗ್ರಹಿಸಿದರು.ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್ ನವೀನ್ ಮಾತನಾಡಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ನಂತರ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ..ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಒಂದುವರೆ ವರ್ಷದ ಅವಧಿಯಲ್ಲಿ 06 ಜನ ಅಧಿಕಾರಿಗಳ ಆತ್ಮಹತ್ಯೆ ಮಾಡಿಕೊಂಡಿದ್ದಾರೆ..ಆತ್ಮಹತ್ಯೆ ಮಾಡಿಕೊಂಡ ಪ್ರತಿಯೊಬ್ಬ ಅಧಿಕಾರಿಯ ಪ್ರಕರಣದಲ್ಲಿ ಒಬ್ಬ ಸಚಿವರ ಹೆಸರು ತಳುಕು ಹಾಕಿಕೊಂಡಿದೆ..ಈ ಸರ್ಕಾರ ಅಧಿಕಾರಕ್ಕೆ ಬಂದಾಗ ಎಸ್.ಎಸ್ (ಸಿದ್ದರಾಮಯ್ಯ ಹಾಗೂ ಶಿವಕುಮಾರ್) ಸರ್ಕಾರ ಅನ್ನುತಿದ್ದರು.. ಈಗ ಇದು ಇನ್ನೊಂದು ತರಹದ ಎಸ್.ಎಸ್ ಸರ್ಕಾರ ಆಗಿದೆ.. (ಸುಸೈಡ್ ಮತ್ತು ಸುಪಾರಿ, ಸುಳ್ಳು ಮತ್ತು ಸಾಲ ಸರ್ಕಾರ).ಸುಸೈಡ್ ನಲ್ಲಿ ಭಾಗಿಯಾಗಿರುವ ಮಂತ್ರಿಗಳ ಬೆಂಗಾವಲಿಗೆ ಸ್ವತಃ ಸಿದ್ಧರಾಮಯ್ಯರವರು ನಿಂತಿದ್ದಾರೆ.ಸ್ವತಹ ಸಿದ್ದರಾಮಯ್ಯನವರೇ ಮಂತ್ರಿಗಳಿಗೆ ಕ್ಲೀನ್ ಚಿಟ್ ಕೊಡುತ್ತಿದ್ದಾರೆ.. ರಾಜ್ಯದಲ್ಲಿ ಪ್ರಿಯಾಂಕ ಖರ್ಗೆಯವರೇ ಸೂಪರ್ ಸಿಎಂ.ಏಕೆಂದರೆ ಮಲ್ಲಿಕಾರ್ಜುನ ಖರ್ಗೆಯವರ ಮಗ ಎನ್ನುವ ಕಾರಣಕ್ಕೆ ಸೂಪರ್ ಸಿಎಂ ಆಗಿ ವರ್ತನೆ ಮಾಡುತ್ತಿದ್ದಾರೆ.ಸಿದ್ದರಾಮಯ್ಯರವರಿಗೆ ದೇಶದ ಕಾನೂನಿನ ಬಗ್ಗೆ, ಸಂವಿಧಾನದ ಬಗ್ಗೆ ಗೌರವವಿದ್ದಾರೆ ಭಾಗಿಯಾಗಿರುವ ಸಚಿವರ ರಾಜೀನಾಮೆಯನ್ನು ಪಡೆಯಬೇಕು. ಅವರು ಕಳಂಕಿತರಾಗಿದ್ದು ಸಂಪುಟದಲ್ಲಿ ಕೂರಲು ಅರ್ಹತೆ ಇಲ್ಲ ಎಂದಿದ್ದಾರೆ.

ರಾಜ್ಯ ಬಿಜೆಪಿ ಪಕ್ಷ ರಾಜೀನಾಮೆ ಆಗ್ರಹಿಸಿ ಜ. 04 ರಂದು ಕಲಬುರ್ಗಿಯಲ್ಲಿ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಂಡಿದ್ದು ಹಾಗೂ ಜಿಲ್ಲಾ ಕೇಂದ್ರಗಳಲ್ಲೂ ಸಹಾ ಪ್ರತಿಭಟನೆ ನಡೆಯಲಿದೆ ಎಂದರು. ಗೋಷ್ಟಿಯಲ್ಲಿ ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ, ತಿಪ್ಪೇಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಮುರಳಿ, ಪ್ರಧಾನ ಕಾರ್ಯದರ್ಶಿಗಳಾದ ಸುರೇಶ್ ಸಿದ್ದಾಪುರ, ಸಂಪತ್ ಕುಮಾರ್, ರಾಜ್ಯ ರೈತ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ್. ಮುಖಂಡರಾದ ಲಕ್ಷ್ಮೀಕಾಂತ್, ಮಾದ್ಯಮ ವಕ್ತಾರ ಭಲವಾದಿ ತಿಪ್ಪೇಸ್ವಾಮಿ ವಿಶ್ವನಾಥ್, ಸೇರಿದಂತೆ ಇತರರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

### ಸಹಾಯಕಿ ಪ್ರಾಧ್ಯಾಪಕಿ ಡಾ.ಡಿ.ಶಶಿಕಲಾ ಬಾಯಿ ಸಲಹೆ

# ನಮ್ಮ ದಿನ ನಿತ್ಯದ ಆಹಾರ ಔಷಧಿಯಾಗಿರಲಿ





» ಚಿತ್ರದುರ್ಗ

ಗಾಳಿ, ನೀರಿನ ನಂತರ ಮನುಷ್ಯನಿಗೆ ಅತ್ಯವಶ್ಯ ವಾದ ಮೂರನೆಯ ಜೀವನಧಾರವೇ ಆಹಾರ. ನಮ್ಮ ದಿನನಿತ್ಯದ ಆಹಾರದಲ್ಲಿ ಮೂರು ಬಿಳಿ ಪದಾರ್ಥಗಳಾದ ಮೈದಾ, ಉಪ್ಪು ಮತ್ತು ಸಕ್ಕರೆ ಮಿತಗೊಳಿಸಬೇಕು. ನಾವು ಸೇವಿಸುವ ನಿತ್ಯದ ಆಹಾರ ಔಷಧಿಯಂತೆ ದೇಹಕ್ಕೆ ಅನುಕೂಲಕರವಾಗಿರಬೇಕು ಎಂದು ಹಿರಿಯೂರು ತೋಟಗಾರಿಕೆ ಮಹಾವಿದ್ಯಾಲಯ ಸಹಾಯಕಿ ಪ್ರಾಧ್ಯಾಪಕಿ ಡಾ.ಡಿ.ಶಶಿಕಲಾ ಬಾಯಿ ಸಲಹೆ ನೀಡಿದರು.ಹಿರಿಯೂರು ತಾಲ್ಲೂಕಿನ ಕಸವನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಗುರುವಾರ ಶಿವಮೊಗ್ಗ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಹಾಗೂ ಹಿರಿಯೂರು ತೋಟಗಾರಿಕೆ ಮಹಾವಿದ್ಯಾಲಯ ಸಹಯೋಗದಲ್ಲಿ ತೋಟಗಾರಿಕೆ ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾದ ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಕ್ರಮದಲ್ಲಿ ಹಾಲಿನ ಮೌಲ್ಯವರ್ಧನೆ ತರಬೇತಿ ಮತ್ತು ಪ್ರಾತ್ಯಕ್ಷಿಕೆ ನಡೆಸಿ ಅವರು ಮಾತನಾಡಿದರು.ನಾವೇನು ಊಟ ಮಾಡುತ್ತಿದ್ದೇವೆ. ಯಾವ ಬಗೆಯ ಆಹಾರ ಸ್ವೀಕರಿಸುತ್ತಿದ್ದೇವೆ. ಯಾಕೆ ಊಟ ಮಾಡುತ್ತಿದ್ದೇವೆ ಎಂಬುದನ್ನು ಮುಖ್ಯವಾಗಿ ಅರಿಯಬೇಕು. ಪ್ರಸ್ತುತ ಸಮತೋಲಿತ ಆಹಾರದ ಕಡೆಗೆ ನಿರ್ಲಕ್ಷ ವಹಿಸುತಿದ್ದೇವೆ. ಶರೀರದ ಜೀವಕೋಶಗಳಲ್ಲಿ ಸರಿಯಾದ ಕಾರ್ಯನಿರ್ವಹಣೆಗೆ ಇರಬೇಕಾದ ಅಂಶಗಳ ಅನುಪಾತ ಏರುಪೇರಾಗಿ ಹೆಚ್ಚು ಶಕ್ತಿಯ ವ್ಯಯವಾಗಿ ನಾವು ಕಾಯಿಲೆಗೆ ಎಡೆ ಮಾಡಿಕೊಡುತ್ತೇವೆ ಎಂದರು.

ಪನ್ನೀರ್ ಮತ್ತು ವೇ.ಪನೀರ್ ತಯಾರಿಕೆ ಮತ್ತು ವಿಧಾನವನ್ನು ಪ್ರಾತ್ಯಕ್ಷಿಕೆ ಮೂಲಕ ವಿದ್ಯಾರ್ಥಿಗಳಿಗೆ ತೋರಿಸಿಕೊಟ್ಟ ಡಾ.ಡಿ.ಶಶಿಕಲಾ ಬಾಯಿ, ಒಡೆದು ಹೋದ ಹಾಲಿನಿಂದ ಮಾಡುವ ಪದಾರ್ಥ ಪನ್ನೀರ್ ಹಾಗೂ ವೇ ಪನ್ನೀರ್. ಇದರಲ್ಲಿ ವಿಟಮಿನ್, ಕ್ಯಾಲ್ಸಿಯಂ ಪ್ರಮಾಣ ಅಧಿಕವಾಗಿದೆ. ಇದರಿಂದ ಸ್ತನ ಕ್ಯಾನ್ಸರ್ ಸೇರಿದಂತೆ ಪನೀರ್ ನಾನ ಕಾಯಿಲೆಗಳಿಗೆ ರಾಮಬಾಣವಾಗಿದೆ. ಪನ್ನೀರ್‌ನಲ್ಲಿ ಔಷಧೀಯ ಗುಣಗಳಿರುವುದರಿಂದ ಪ್ರಸ್ತುತ ದಿನಗಳಲ್ಲಿ ಇದರ ಬಳಕೆ ಹೆಚ್ಚಾಗಿದೆ ಎಂದು ತಿಳಿಸಿದರು.ಜಂಕ್ ಫುಡ್, ಅತಿ ಬೇಯಿಸಿದ ಆಹಾರ, ಸಿದ್ಧ ಆಹಾರಗಳಲ್ಲಿ ಹೆಚ್ಚು ಹೆಚ್ಚು ಉಪ್ಪಿನಂಶ ಇರುವುದರಿಂದ ಇವು ಅಪಾಯಕಾರಿ. ಇಂದು ಅಪೌಷ್ಟಿಕತೆ ನಿವಾರಣೆ ಪ್ರಯತ್ನದಲ್ಲಿ ದಾಪುಗಾಲು ಹಾಕುತ್ತಿದ್ದರೂ ವಿಟಮಿನ್ ಕೊರತೆ, ಖನಿಜಾಂಶಗಳ ಕೊರತೆ, ಬೊಜ್ಜು ಸಮಸ್ಯೆ ಸೇರಿದಂತೆ ಹಲವು ರೋಗಗಳಿಂದ ಬಳಲುವಂತಾಗಿದೆ. ಇವೆಲ್ಲ ಸಮಸ್ಯೆಗಳಿಗೂ ಬಹುಶಃ ಅಗ್ಗದ, ಹೆಚ್ಚು ಸಂಸ್ಕರಿಸಿದ ಕಾರಣ. ಇವು ನಾಲಿಗೆಯ ರುಚಿ ತಣಿಸುವುದಷ್ಟಕ್ಕೆ ಸೀಮಿತವಾಗಿವೆ ಎಂದು ಡಾ.ಡಿ.ಶಶಿಕಲಾ ಬಾಯಿ ಹೇಳಿದರು. ಕಾರ್ಯಕ್ರಮದಲ್ಲಿ ಡಾ.ಬರ್ಮಪ್ಪ ಹಾಗೂ ಕಸವನಹಳ್ಳಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಶಿವಮೂರ್ತಿ, ಅಂಗನವಾಡಿ ಶಿಕ್ಷಕಿ ಶಿಲ್ಪ ಮತ್ತು ಪುಷ್ಪ ಹಾಗೂ ಗ್ರಾಮದ ಹಿರಿಯರು, ವಿವಿಧ ಸಂಘ ಸಂಸ್ಥೆಗಳ ಮಹಿಳೆಯರು ಇದ್ದರು. ಅಂತಿಮ ವರ್ಷದ ತೋಟಗಾರಿಕೆ ವಿದ್ಯಾರ್ಥಿಗಳಾದ ಗೌತಮ್ , ಸುದೀಪ್, ಪವನ್, ರಾಕೇಶ್, ಕಾವೇರಿ,ಅಂಜುಮ್, ಬಿಂದುಶ್ರೀ, ರಕ್ಷಿತಾ, ಚೈತ್ರ, ಅಂಬಿಕ, ಅಪರ್ಣ, ಶ್ರೇಯ, ನವೀನ್, ಜನಾರ್ದನ್ ಕಾರ್ಯಕ್ರಮ ನಡೆಸಿಕೊಟ್ಟರು.

## ಫಾಸ್ಟ್ ನ್ಯೂಸ್

### ಅಕ್ರಮ ಮದ್ಯ ಮಾರಾಟ ಹಾಗೂ ಮಟ್ಕಾ ಚೀಟಿ ಪ್ರಕರಣ: ಇಬ್ಬರ ವ್ಯಕ್ತಿಗಳ ಮೇಲೆ ಮೊಕದ್ದಮೆ.

» **ಚಳ್ಳಕೆರೆ**

ಚಳ್ಳಕೆರೆ ಠಾಣಾ ವ್ಯಾಪ್ತಿಯ ಭರಮಸಾಗರ ಗ್ರಾಮದ ಚಿಲ್ಲರೆಅಂಗಡಿಯಲ್ಲಿ ಅಬಕಾರಿ ಇಲಾಖೆಯ ಅನುಮತಿಪಡೆಯದೆ ಅಕ್ರಮವಾಗಿ ಮದ್ಯಮಾರಾಟ ಮಾಡುತ್ತಿದ್ದ ಅದೇ ಗ್ರಾಮದ ರವಿ(32) ಎಂಬುವವನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ನೇತೃತ್ವದಲ್ಲಿ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಸಾರ್ವಜನಿಕರಿಂದ ಮಾಹಿರಿ ಆಧಾರದ ಮೇಲೆ ಸ್ಥಳಕ್ಕೆ ಭೇಟಿ ನೀಡಿದಾಗ ಅದೇ ಗ್ರಾಮದ ರವಿ ವ್ಯಕ್ತಿ ಸುಮಾರುಸಾವಿರಾರು ಮೌಲ್ಯದ ಅಕ್ರಮ ಮದ್ಯವನ್ನು ಚಿಲ್ಲರೆಅಂಗಡಿಯಲ್ಲಿ ಮಾರಾಟ ಮಾಡುತ್ತಿದ್ದು, ಅವನನ್ನು ಪೊಲೀಸರು ವಶಪಡೆದು ಪ್ರಕರಣದಾಖಲು ಮಾಡಲಾಗಿದೆ. ಮಟ್ಕಾಚೀಟಿ :– ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಸಾರ್ವಜನಿಕ ರಸ್ತೆಯಲ್ಲಿ ಗಿರಿಯಮ್ಮನಹಳ್ಳಿಯ ದಾದಾಪೀರ್ ಎಂಬ ವ್ಯಕ್ತಿ ಮಟ್ಕಾಚೀಟಿ ಬರೆಯುತ್ತಿದ್ದ ಬಗ್ಗೆ ಮಾಹಿತಿ ಪಡೆದು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದಾಗ ದಾದಾಪೀರ್(70) ಎಂಬುವವರು ಮಟ್ಕಾ ಬರೆಯುತ್ತಿದ್ದು ಕಂಡುಬಂದಿದೆ. ಅವರಿಂದ 4730ರೂ ಹಾಗೂ ಇತರೆ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಇನ್ಸ್‌ಪೆಕ್ಟರ್ ಆರ್.ಎಫ್.ದೇಸಾಯಿ ತಿಳಿಸಿದ್ದಾರೆ.

### ರಂಗಣ್ಣಸ್ವಾಮಿ ಶಿಷ್ಯವೃಂದಿಂದ ಶ್ರೀಅಯ್ಯಪ್ಪಸ್ವಾಮಿಯ ಪಡಿಪೂಜೆ ಉತ್ಸವ.



» **ಚಳ್ಳಕೆರೆ**

ನಗರದಹಳೇಪುರಸಭೆಕಚೇರಿಆವರಣದಲ್ಲಿರುವ ಪಾರ್ಕ್‌ನಲ್ಲಿ ಕಳೆದ ಹಲವಾರು ವರ್ಷಗಳಿಂದ ಶ್ರೀರಂಗಣ್ಣಸ್ವಾಮಿ ಶಿಷ್ಯವೃಂದ ಕಳೆದ ಸುಮಾರು 30 ವರ್ಷಗಳಿಂದ ಅಯ್ಯಪ್ಪಸ್ವಾಮಿ ಪಡಿಪೂಜಾ ಕಾರ್ಯವನ್ನು ಭಕ್ತಿ,ಶ್ರದ್ಧೆಯಿಂದ ನಡೆಸಿಕೊಂಡು ಬರುತ್ತಿದ್ಧಾರೆ. ಬುಧವಾರ ತಡರಾತ್ರಿಯೂ ಸಹ ನೂರಾರು ಅಯ್ಯಪ್ಪಸ್ವಾಮಿ ಭಕ್ತರು ಪಡಿಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪೂಜೆಯಲ್ಲಿ ಭಾಗವಹಿಸಿದ್ದ ಎಲ್ಲರಿಗೂ ಪ್ರಸಾದವನ್ನು ವಿತರಿಸಿದರು. ಶಬರಿಮಲೈ ಶ್ರೀಅಯ್ಯಪ್ಪಸ್ವಾಮಿ ದೇವಸ್ಥಾನದ ಮಾದರಿಯನ್ನು ಬಾಳೆದಿಂಡಿನಿಂದ ನಿರ್ಮಿಸಲಾಗಿತ್ತು. ಬೆಳಗಿನಿಂದಲೇ ಶ್ರೀಸ್ವಾಮಿಗೆ ವಿಶೇಷ ಪೂಜಾ ಕಾರ್ಯಕ್ರಮ ಹಮ್ಮಿಕೊಂಡು ನಂತರ ಉಪಸ್ಥಿತರಿದ್ದ ಎಲ್ಲಾ ಭಕ್ತರಿಗೆ ಸಿಹಿ ನೀಡಿ ಪ್ರಸಾದ ವಿತರಿಸಿದರು. ಗುರುಸ್ವಾಮಿಯಾದ ಕುಮಾರಸ್ವಾಮಿ, ಗೋವಿಂದಸ್ವಾಮಿ, ವೀರೇಶ್, ಬಸವರಾಜ, ರಾಮಸ್ವಾಮಿ, ವೆಂಕಟೇಶ್, ರೇವಣ್ಣ ಮುಂತಾದವರು ಪಾಲ್ಗೊಂಡಿದ್ದರು.

### ಅಪೂರ್ಣ ಅರ್ಜಿ ಪೂರ್ಣಗೊಳಿಸಲು ಜ.05 ರವರೆಗೆ ಅವಕಾಶ

» **ಚಿತ್ರದುರ್ಗ**

ಚಿತ್ರದುರ್ಗ ಹಾಗೂ ಹೊಳಲ್ಕೆರೆ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳಿಗೆ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಮಾತ್ರ ಅರ್ಜಿ ಪೂರ್ಣಗೊಳಿಸಲು 2025ರ ಜ.05 ರವರೆಗೆ ಕಾಲಾವಕಾಶ ಕಲ್ಪಿಸಲಾಗಿದೆ.ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಪ್ರಸ್ತುತ ಅರ್ಜಿ ಸಲ್ಲಿಕೆ ಕಾಲಾವಧಿ ಮುಕ್ತಾಯಗೊಂಡಿದ್ದು, ಅರ್ಜಿ ಸಲ್ಲಿಸುವಾಗ ವೆಬ್‌ಸೈಟ್‌ನಲ್ಲಿ ಒಟ್ಟು 04 ಹಂತಗಳಿದ್ದು, ಮೊದಲನೇ ಹಂತದಲ್ಲಿ ಆನ್‌ಲೈನ್ ತಂತ್ರಾಂಶದಲ್ಲಿ ನಿಗಧಿತ ಅರ್ಜಿ ನಮೂನೆಯಲ್ಲಿ ಮಾಹಿತಿ ತುಂಬುವುದು, ಎರಡನೇ ಹಂತದಲ್ಲಿ ತಮ್ಮ ಭಾವಚಿತ್ರ ಸಹಿ ಅಪ್‌ಲೋಡ್ ಮಾಡುವುದು. ಮೂರನೇ ಹಂತ ತಮ್ಮ ದಾಖಲಾತಿಗಳನ್ನು ಅಪ್‌ಲೋಡ್ ಮಾಡುವುದು ಹಾಗೂ ನಾಲ್ಕನೇ ಹಂತ ತಮ್ಮ ಆಧಾರ್ ಸಂಖ್ಯೆ ನಮೂದಿಸಿ ಇ–ಹಸ್ತಾಂಕ್ಷರದೊಂದಿಗೆ ಅರ್ಜಿ ಪೂರ್ಣಗೊಳಿಸಬೇಕಾಗಿರುತ್ತದೆ. ಇದರಲ್ಲಿ ಕೆಲವರು ಮೊದಲನೇ ಹಂತದಲ್ಲಿಯೇ ಅಪ್ಲಿಕೇಶನ್ ಸಕ್ಸಸ್‌ಫುಲ್ ಅಪ್‌ಲೋಡ್ ಎಂಬ ಸಂದೇಶ ಅವರುಗಳ ಮೊಬೈಲ್‌ಗೆ ಸ್ವೀಕೃತವಾಗಿರುವುದರಿಂದ ಅರ್ಜಿ ಪೂರ್ಣಗೊಳಿಸಿರುವುದಿಲ್ಲ.ಅರ್ಜಿ ಸಲ್ಲಿಸುವ ನಾಲ್ಕು ಹಂತಗಳನ್ನು ಪೂರ್ಣಗೊಳಿಸದೇ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ 2025ರ ಜ.5 ರವರೆಗೆ ಅರ್ಜಿಗಳನ್ನು ಪೂರ್ಣಗೊಳಿಸಲು ಅವಕಾಶ ಕಲ್ಪಿಸಲಾಗಿದೆ ಎಂದ ಪ್ರಕಟಣೆ ತಿಳಿಸಿದೆ.

### ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ

# ವಿಕಲಚೇತನರನ್ನು ಅಲೆದಾಡಿಸಿದರೆ ದೂರು ನೀಡಿ

» **ಚಿತ್ರದುರ್ಗ**

ಸರ್ಕಾರದ ವಿವಿಧ ಯೋಜನೆಗಳಡಿ ಸಾಲ ಸೌಲಭ್ಯಕ್ಕಾಗಿ ಆಯ್ಕೆಯಾದ ವಿಕಲಚೇತನ ಫಲಾನುಭವಿಗಳನ್ನು ಬ್ಯಾಂಕ್‌ಗಳು ವಿನಾಕಾರಣ ಅಲೆದಾಡಿಸಿದರೆ ತಕ್ಷಣ ವಿಕಲಚೇತನರ ಕುಂದುಕೊರತೆ ಕೋಶಕ್ಕೆ ದೂರು ನೀಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ವಿಕಲಚೇತನ ಫಲಾನುಭವಿಗಳಿಗೆ ಸಾಲ–ಸೌಲಭ್ಯಕ್ಕಾಗಿ ಅಲೆದಾಡಿಸುವ ಸಂಬಂಧಪಟ್ಟ ಬ್ಯಾಂಕ್‌ಗಳಿಗೆ ಪ್ರತ್ಯೇಕವಾಗಿ ನಿರ್ದೇಶನ ನೀಡಬೇಕು. ಸಾಲ–ಸೌಲಭ್ಯಕ್ಕಾಗಿ ದಾಖಲಾಗುವ ದೂರುಗಳ ಬಗ್ಗೆ ಮುಂದಿನ ಸಭೆಯಲ್ಲಿ ಅನುಪಾಲನಾ ವರದಿ ಮಂಡಿಸುವಂತೆ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗೆ ಸೂಚನೆ ನೀಡಿದರು.

ವಿಕಲಚೇತನರಿಗೆ ಸಮಾಜದಲ್ಲಿ ಸಮಾನ ಅವಕಾಶ ಕಲ್ಪಿಸಿ ಸರ್ವತೋಮುಖ ಸಬಲೀಕರಣಗೊಳಿಸುವುದು ಹಾಗೂ ಅವರ ಹಕ್ಕುಗಳನ್ನು ಸಂರಕ್ಷಣೆ ಮಾಡಿ ಸಮಾಜದ ಮುಖ್ಯವಾಹಿನಿಗೆ ತರುವುದು ಹಾಗೂ ವಿಕಲಚೇತನರ ಘನತೆ ಮತ್ತು ಗೌರವ ಕಾಪಾಡಬೇಕು ಎಂದು ತಿಳಿಸಿದ ಅವರು, ವಿವಿಧ ಇಲಾಖೆಗಳಡಿ ವಿಕಲಚೇತನರಿಗೆ ದೊರೆಯುವ ಸೌಲಭ್ಯಗಳು, ಈ ಸೌಲಭ್ಯಗಳು ವಿಕಲಚೇತನರಿಗೆ ಸಮರ್ಪಕವಾಗಿ ತಲುಪುತ್ತಿದೆಯೋ, ಇಲ್ಲವೋ ಹಾಗೂ ಮೀಸಲಾತಿ ಅನುಷ್ಠಾನದ ಕುರಿತು ಮಾಹಿತಿ ನೀಡಬೇಕು. ಇದರಿಂದ ವಿಕಲಚೇತನರ ಕುಂದುಕೊರತೆ ಬಗೆಹರಿಸಬಹುದು. ವಿಕಲಚೇತನರ ಕುಂದುಕೊರತೆ ನಿವಾರಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳೂ ಸಭೆ ಆಯೋಜಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಾಕೀತು ಮಾಡಿದರು.

ಜಿಲ್ಲೆಯಲ್ಲಿ 35,971 ವಿಕಲಚೇತನರು: 2011ರ ಜನಗಣತಿಯ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 35,971 ಜನ ವಿಕಲಚೇತನರು ಇದ್ದಾರೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ದೃಷ್ಠಿದೋಶವುಳ್ಳ 6,196, ಶ್ರವಣದೋಷ–6,096, ಮಾತಿನ ದೋಷ–2,880, ಮಾನಸಿಕ ಅಸ್ವಸ್ಥರು–415, ಬುದ್ಧಿಮಾಂದ್ಯರು–2,461, ದೈಹಿಕ ವಿಕಲಚೇತನರು–8,373, ಬಹುವಿಧ ವಿಕಲಚೇತನರು–2,961 ಹಾಗೂ ಇತರೆ ವಿಕಲಚೇತನರು 6,589 ಸೇರಿದಂತೆ ಒಟ್ಟು 35,971 ವಿಕಲಚೇತನರು ಇದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಮೂಲಕ ಸೌಲಭ್ಯಗಳನ್ನು ಒದಗಿಸುವ ಮೂಲಕ ಮುಖ್ಯವಾಹಿನಿಗೆ ಬರುವಲ್ಲಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದ ಅವರು, ಜಿಲ್ಲೆಯಲ್ಲಿ 33,075 ವಿಕಲಚೇತನರಿಗೆ ಯುಡಿಐಡಿ ಗುರುತಿನ ಕಾರ್ಡ್ ವಿತರಣೆ ಮಾಡಲಾಗಿದೆ ಎಂದರು.

ಗ್ರಾಮೀಣ ಮತ್ತು ನಗರ, ತಾಲ್ಲೂಕು ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿ.ಆರ್.ಡಬ್ಲ್ಯೂ, ಯು.ಆರ್.ಡಬ್ಲ್ಯೂ, ಎಂ.ಆರ್.ಡಬ್ಲ್ಯೂ ಅವರ ಪ್ರತ್ಯೇಕ ಸಭೆ ಆಯೋಜಿಸುವಂತೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಗ್ರಾಮ ಒನ್ ಸೆಂಟರ್‌ಗಳಲ್ಲಿ ಉಚಿತ ಬಸ್‌ಪಾಸ್ ನವೀಕರಣ ಅರ್ಜಿ ಸಲ್ಲಿಕೆ: ವಿಕಲಚೇತನರಿಗೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ 100 ಕಿ.ಮೀ. ವ್ಯಾಪ್ತಿಯಲ್ಲಿ ಪ್ರಯಾಣಿಸಲು ರಿಯಾಯಿತಿ ದರದಲ್ಲಿ ಬಸ್‌ಪಾಸ್ ನೀಡಲಾಗುತ್ತಿದೆ. ಈ ಬಸ್‌ಪಾಸ್ ಅವಧಿ ಕಳೆದ ಡಿಸೆಂಬರ್‌ಗೆ ಅಂತ್ಯವಾಗಿದ್ದು, ಬಸ್‌ಪಾಸ್ ನವೀಕರಣಕ್ಕೆ ವಿಕಲಚೇತನರು ಸೇವಾ ಸಿಂಧು ತಂತ್ರಾಶದಲ್ಲಿ ಅರ್ಜಿ ಸಲ್ಲಿಸಬೇಕು. ಈ ವೇಳೆ ಖಾಸಗಿ ಕಂಪ್ಯೂಟರ್ ಸೆಂಟರ್‌ಗಳಲ್ಲಿ ನವೀಕರಣ ಅರ್ಜಿ ಸಲ್ಲಿಸಲು ರೂ.100 ವರೆಗೆ ಶುಲ್ಕ ವಿಧಿಸುತ್ತಿದ್ದಾರೆ. ಇದರಿಂದ ವಿಕಲಚೇತನರಿಗೆ ಆರ್ಥಿಕವಾಗಿ ಹೊರೆಯಾಗುತ್ತಿದೆ ಎಂದು ಸಭೆಯಲ್ಲಿ ವಿಕಲಚೇತನರು ಜಿಲ್ಲಾಧಿಕಾರಿಗಳ ಗಮನಕ್ಕೆ ತಂದರು.

ಇದಕ್ಕೆ ಸ್ಪಂದಿಸಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಗ್ರಾಮ ಒನ್ ಸೆಂಟರ್‌ಗಳಲ್ಲಿ ಉಚಿತವಾಗಿ ಬಸ್‌ಪಾಸ್ ನವೀಕರಣ ಅರ್ಜಿ ಸಲ್ಲಿಕೆಗೆ ಅವಕಾಶ ಕಲ್ಪಿಸಲು ನಿರ್ದೇಶನ ನೀಡುವುದಾಗಿ ತಿಳಿಸಿದರು.

ಶಕ್ತಿ ಯೋಜನೆ ಮಾದರಿಯಲ್ಲಿ ವಿಕಲಚೇತನರಿಗೂ ರಾಜ್ಯಾದ್ಯಂತ ಉಚಿತ ಪ್ರಯಾಣ ಅವಕಾಶ ನೀಡುವ ಪ್ರಸ್ತಾವನೆ ರಾಜ್ಯ ಸರ್ಕಾರದ ಮುಂದಿದೆ ಎಂದು ತಿಳಿದುಬಂದಿದೆ ಎಂಬುದಾಗಿ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ವೈಶಾಲಿ. ಜೆ ಸಭೆಯಲ್ಲಿ ಮಾಹಿತಿ ನೀಡಿದರು.

**ಪುನರ್ವಸತಿ ಕೇಂದ್ರದ ಖಾಲಿ ಹುದ್ದೆಗಳ ಭರ್ತಿಗೆ ನಿರ್ದೇಶನ:** ಜಿಲ್ಲೆಯ ವಿಕಲಚೇತನರ ಪುನರ್ವಸತಿ ಕೇಂದ್ರ ಸಮರ್ಪಕವಾಗಿ ಕಾರ್ಯನಿರ್ವಹಿಸುವ ದೃಷ್ಠಿಯಿಂದ ಖಾಲಿ ಇರುವ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳುವಂತೆಜಿಲ್ಲಾಧಿಕಾರಿಟಿ.ವೆಂಕಟೇಶ್ ಜಿಲ್ಲಾ ವಿಕಲಚೇತನರ ಕಲ್ಯಾಣಧಿಕಾರಿಗೆ ನಿರ್ದೇಶನ ನೀಡಿದರು. ಖಾಲಿ ಇರುವ ಹುದ್ದೆಗಳು ಭರ್ತಿಯಾಗುವವರೆಗೂ ಅಗತ್ಯ ಇರುವ ವೈದ್ಯರು ಹಾಗೂ ಇತರೆ ವೈದ್ಯಕೀಯ ಸಿಬ್ಬಂದಿಯ ಸೇವೆಯನ್ನು ಜಿಲ್ಲಾ ಆಸ್ಪತ್ರೆಯಿಂದ ಪಡೆದುಕೊಳ್ಳುವಂತೆ ಸೂಚಿಸಿದರು. ಖಾಲಿ ಇರುವ ತಜ್ಞ ವೈದ್ಯರು ಹಾಗೂ ಇತರೆ ವೈದ್ಯಕೀಯ ಸಿಬ್ಬಂದಿಗೆ ನೇಮಕಾತಿ ಕುರಿತು ವೈದ್ಯಕೀಯ ಕಾಲೇಜುಗಳಿಗೆ ಮಾಹಿತಿ ನೀಡಿ, ಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರ ನೀಡುವಂತೆ ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್ ಹೇಳಿದರು.

ಹಗಲು ಯೋಗಕ್ಷೇಮ ಕೇಂದ್ರ ವಿಸ್ತರಣೆಗೆ ಕ್ರಮ: ಹಿರಿಯ ನಾಗರಿಕರಿಗೆ ಆರೋಗ್ಯ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ಕಲ್ಪಿಸುವ ದೃಷ್ಠಿಯಿಂದ ರಾಜ್ಯ ಸರ್ಕಾರದ ಅನುದಾನದಡಿ ಜಿಲ್ಲೆಯ ಹಿರಿಯೂರು ನಗರದಲ್ಲಿ ಹಗಲು ಯೋಗಕ್ಷೇಮ ಕೇಂದ್ರವನ್ನು ಶ್ರೀ ಸಿದ್ಧೇಶ್ವರ ರೂರಲ್ ಡೆವೆಲಪ್‌ಮೆಂಟ್ ಸೊಸೈಟಿ ವತಿಯಿಂದ ತೆರೆಯಲಾಗಿದೆ. ಈ ಕೇಂದ್ರದಲ್ಲಿ ಹಿರಿಯ ನಾಗರಿಕರಿಗೆ ಲಘು ಉಪಹಾರ, ಮನೋರಂಜನೆ ಕಾರ್ಯಕ್ರಮ, ಸುದ್ದಿ ಪತ್ರಿಕೆಗಳನ್ನು ಒದಗಿಸಲಾಗುತ್ತದೆ. ಇದರೊಂದಿಗೆ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಲಾಗುವುದು ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ವೈಶಾಲಿ ಜೆ. ಸಭೆಯಲ್ಲಿ ತಿಳಿಸಿದರು.

ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿಯೂ ಹಗಲು ಯೋಗಕ್ಷೇಮ ಕೇಂದ್ರಗಳನ್ನು ವಿಸ್ತರಿಸುವ ಸಾಧ್ಯತೆ ಕುರಿತು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ.ಕಾಳೇಸಿಂಘೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಘದ ಪ್ರತಿನಿಧಿಗಳು ಇದ್ದರು.

## ಸಂಜು ವೆಡ್ಸ್ ಗೀತಾ–2 ಚಿತ್ರದ ಆಡಿಯೋ ಬಿಡುಗಡೆ

» **ಚಿತ್ರದುರ್ಗ**

ಸಂಜು ವೆಡ್ಸ್ ಗೀತಾ–2 ಚಿತ್ರದ ಆಡಿಯೋವನ್ನು ಇಂದು ಚಿತ್ರದುರ್ಗದ ಬಿಗ್‌ಬಾಸ್ ಹೋಟಲ್‌ನಲ್ಲಿ ಬಿಡುಗಡೆ ಮಾಡಲಾಯಿತು. ಈ ವೇಳೆ ಚಿತ್ರದ ನಟ ಶ್ರೀನಗರ ಕಿಟ್ಟಿ ಮಾತನಾಡಿ, ರೇಷ್ಮೆ ಬೆಳೆಗಾರರ ಸಮಸ್ಯೆಗಳನ್ನು ಕುರಿತು ಚಿತ್ರದಲ್ಲಿ ತೋರಿಸಲಾಗಿದ್ದು, ಅವರಿಗೆ ರೇಷ್ಮೆ ಬೆಳೆಯಿಂದ ಯಾವ ರೀತಿಯ ಸಮಸ್ಯೆ ಎದುರಾಗುವುದು ಎಂಬುದನ್ನು ಚಿತ್ರದಲ್ಲಿ ತೋರಿಸಲಾಗಿದೆ ಎಂದು ವಿವರಣೆ ನೀಡಿದರು. ಇದೇ ಜನವರಿ 10 ರಂದು ಸಂಜುವೆಡ್ಸ್ ಗೀತಾ–2 ಚಿತ್ರ ವಿಶ್ವದಾದ್ಯಂತ ಬಿಡುಗಡೆ ಆಗಲಿದೆ. ಚಿತ್ರದುರ್ಗದಲ್ಲಿ ಪ್ರಸನ್ನ ಥೇಯೇಟರ್‌ಗಳಲ್ಲಿ ಮ್ಯಾಕ್ಸ್, ಹಾಗೂ ವೆಂಕಟೇಶ್ವರ ಚಿತ್ರದಮಂದಿರದಲ್ಲಿ ಗು ಚಿತ್ರ ಓಡುತ್ತಿದ್ದು, ಗು ಚಿತ್ರದ ನಿರ್ಮಾಪಕರೊಂದಿಗೆ ಮಾತನಾಡಿರುವುದಾಗಿ ತಿಳಿಸಿದ ಅವರು, ಚಿತ್ರವನ್ನು ನೋಡಿ ಹಾರೈಸಬೇಕು




ಎಂದು ಜನರಲ್ಲಿ ಮನವಿ ಮಾಡಿದರು. ಸಂಜು ವೆಡ್ಸ್ ಗೀತಾ–2 ಚಿತ್ರದ ನಿರ್ಮಾಪಕ ಚಲವಾದಿ ಕುಮಾರ್, ಬಿ. ಕಾಂತರಾಜು ಆಡಿಯೋ ಬಿಡುಗಡೆ ಕಾರ್ಯದಲ್ಲಿ ಉಪಸ್ಥಿತರಿದ್ದರು.



**ಚಿತ್ರದುರ್ಗದ ಜಿಲ್ಲಾಧಿಕಾರಿ ವೆಂಕಟೇಶ್‌ರವರು ತಮ್ಮ ಕಚೇರಿಯಲ್ಲಿ ರೆಡ್‌ಕ್ರಾಸ್ ಸಂಸ್ಥೆಯ 2025ನೇ ಸಾಲಿನ ದಿನ ದರ್ಶಿಕೆಯನ್ನು ಬಿಡುಗಡೆ ಮಾಡಿದರು. ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸೋಮಶೇಖರ್, ರೆಡ್‌ಕ್ರಾಸ್ ಸಂಸ್ಥೆ ಕಾರ್ಯದರ್ಶಿ ಮಜರ್‌ವುಲ್ಲಾ, ಉಪ ಸಭಾಪತಿ. ಅರುಣ್ ಕುಮಾರ್, ಕೋಶಾಧ್ಯಕ್ಷ ಎಸ್.ವಿರೇಶ್, ನಿರ್ದೇಶಕರಾದ ಶ್ರೀನಿವಾಸ್, ಪೂಜಾರ್ ಭಾಗವಹಿಸಿದ್ದರು**

## ಹರಿಹರಸುತ ಸೇವಾ ಸಮಿತಿಯಿಂದ ಅಯ್ಯಪ್ಪಸ್ವಾಮಿಯ ವಿಶೇಷ ಪಡಿಪೂಜೆ: ಕೃತಕ ಸೆಟ್‌ನಲ್ಲಿ ಕಂಗೊಳಿಸಿದ ಶ್ರೀಅಯ್ಯಪ್ಪ

» **ಚಳ್ಳಕೆರೆ**

ನಗರದ ಹರಿಹರಸುತ ಸೇವಾಸಮಿತಿ ಹಾಗೂ ಸಮಸ್ತ ಅಯ್ಯಪ್ಪಸ್ವಾಮಿ ಭಕ್ತರ ಸಹಯೋಗದಲ್ಲಿ ಗಾಯಿತ್ರಿ ಕಲ್ಯಾಣಮಂಟಪದಲ್ಲಿ ನಾಲ್ಕನೇ ವರ್ಷದ ವಿಶೇಷ ಅಯ್ಯಪ್ಪಸ್ವಾಮಿಯ ಪಡಿಪೂಜೆ ಕಾರ್ಯಕ್ರಮ ಹಾಗೂ ಹೋಮಹವನಗಳು ಸಾವಿರಾರು ಅಯ್ಯಪ್ಪಭಕ್ತರ ಜಯಕಾರ ಹಾಗೂ ನೆರೆದಿದ್ದ ಭಕ್ತರ ಸಹಕಾರದೊಂದಿಗೆ ಯಶಸ್ವಿಯಾಗಿ ನಡೆಯಿತು.

ವಿಶೇಷವೆಂದರೆ ಶಬರಿಮಲೈನಲ್ಲಿ



ನೆಲೆಸಿರುವ ಶ್ರೀಅಯ್ಯಪ್ಪಸ್ವಾಮಿಯನ್ನು ಗಾಯಿತ್ರಿ ಕಲ್ಯಾಣ ಮಂಟಪ ಆವರಣದಲ್ಲಿ ಕೃತವಾಗಿ ನಿರ್ಮಿಸಿದ ಅಯ್ಯಪ್ಪಸ್ವಾಮಿಯ ಸೆಟ್‌ನಲ್ಲಿ ಪೂಜಾ ಕಾರ್ಯಕ್ರಮಗಳು ನಡೆಸಲಾಯಿತು. ಹರಿಹರಸುತ ಸೇವಾ ಸಮಿತಿ ಎಲ್ಲರ ಸಹಕಾರದೊಂದಿಗೆ ಈ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ಹಮ್ಮಿಕೊಂಡಿತ್ತು. ನಾಲ್ಕನೇ ವರ್ಷದ ಪಡಿಪೂಜಾ ಕಾರ್ಯಕ್ರಮಕ್ಕೆ ನಿರೀಕ್ಷೆಗೂ ಮೀರಿ ಭಕ್ತರು ಆಗಮಿಸಿದ್ದರು.

ಶಬರಿಮಲೆ ಸನ್ನಿಧಾನದ ಅರ್ಚಕರಾದ ಆನಂದನಂಬೂದರಿ ಮತ್ತು ಶಿಷ್ಯವೃಂದ ಹರಿಹರಸುತ ಸೇವಾ ಸಮಿತಿಯ ಕೀರ್ತಿಪ್ರಸಾದ್, ಮಂಜುನಾಥಕಂಚಿ ಮುಂತಾದವರು ಕಾರ್ಯಕ್ರಮವನ್ನು ಅತ್ಯಂತ ವಿಜೃಂಭಣೆಯಿಂದ ನಡೆಸುವ ಸಲುವಾಗಿ ಪೂರ್ವಸಿದ್ಧತೆ ಕೈಗೊಂಡಿದ್ದರು. ಶಬರಿಮಲೈ ದವಸ್ಥಾನದ ಅರ್ಚಕವೃಂದ ಗಾಯಿತ್ರಿ ಕಲ್ಯಾಣಮಂಟಪದ ಒಳಾಂಗಣದಲ್ಲಿ ಅಯ್ಯಪ್ಪಸ್ವಾಮಿ ದೇವರನ್ನು ರಂಗೋಲಿಯಲ್ಲಿ ಆಕರ್ಷಕವಾಗಿ ಚಿತ್ರಿಸಿದ್ದರು.

**ಪ್ರಮುಖ ಸುದ್ದಿ**

# ಜ.4,5ರಂದು ಬೃಹತ್ ಆಟೋ ಎಕ್ಸ್‌ಪೋ ಆಯೋಜನೆ...

» **ದಾವಣಗೆರೆ**

ಮಧ್ಯ ಕರ್ನಾಟಕದ ಕೇಂದ್ರ ಬಿಂದು, ಬೆಣ್ಣೆದೋಸೆ, ಚುರುಮುರಿ ನಗರಿ ದಾವಣಗೆರೆಯಲ್ಲಿ ಇದೇ ಮೊದಲ ಬಾರಿಗೆ 2025 ಜನವರಿ 4 ಮತ್ತು 5ರ ಶನಿವಾರ ಮತ್ತು ಭಾನುವಾರ ಬೃಹತ್ ಆಟೋ ಎಕ್ಸ್ ಪೋ ಆಯೋಜನೆ ಮಾಡಲಾಗಿದೆ ಎಂದು ಅಮೃತಾ ಐ.ಎನ್.ಸಿ ಸಂಸ್ಥಾಪಕರಾದ □□□ನಿ ಅಮೃತಾ ಶ್ರೀನಿವಾಸ್ ತಿಳಿಸಿದರು.

ದಾವಣಗೆರೆನಗರದಸದರನ್‌ಹೋಟೆಲ್ ನಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಾವಣಗೆರೆ ಜಿಲ್ಲೆಯಲ್ಲಿ ಇದೇ ಮೊದಲ ಬಾರಿಗೆ ಆಟೋ ಎಕ್ಸ್ ಪೋ ಆಯೋಜಿಸಿದ್ದು, ಸಾರ್ವಜನಿಕರಿಗೆ ಮಲ್ಟಿ ಬ್ರಾಂಡ್ ಕಾರು ಹಾಗೂ ದ್ವಿಚಕ್ರ ವಾಹನಗಳ ಪ್ರದರ್ಶನ ಮತ್ತು ಮಾಹಿತಿ ಲಭ್ಯವಾಗಲಿದೆ. ಜ.4 ರಂದು ಬೆಳಗ್ಗೆ 11 ಗಂಟೆಗೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಆಟೋ ಎಕ್ಸ್ ಪೋಗೆ ಚಾಲನೆ ನೀಡಲಿದ್ದಾರೆ. ದಾವಣಗೆರೆ ಶುಗರ್ಸ್ ಹಾಗೂ ಸದರನ್



ಹೋಟೆಲ್ ವ್ಯಾವಸ್ಥಾಪಕ ನಿರ್ದೇಶಕರಾದ ಅಭಿಜಿತ್ ಅವರು ವಿಶೇಷ ಅತಿಥಿಗಳಾಗಿ ಭಾಗವಲಿಸಲಿದ್ದಾರೆ ಎಂದರು.ಎರಡು ದಿನಗಳ ಕಾಲ ವಿವಿಧ ಕಂಪನಿಯ ಐಷಾರಾಮಿ ಕಾರುಗಳು ಹಾಗೂ ಬೈಕ್ಗಳು ಪ್ರದರ್ಶನಕ್ಕಿದ್ದು, ಸಾರ್ವಜನಿಕರು ಉಚಿತವಾಗಿ ಭೇಟಿ ನೀಡಿ ತಮ್ಮ ಇಚ್ಛೆಯ ಕಾರುಗಳನ್ನು ಕಣ್ತುಂಬಿಕೊಂಡು ಮಾಹಿತಿ ಪಡೆಯಬಹುದು. ಈ ಆಟೋ ಎಕ್ಸ್ ಪೋದಲ್ಲಿ 15 ಕ್ಕೂ ಹೆಚ್ಚಿನ ಬ್ರ್ಯಾಂಡ್ ಕಂಪನಿಯ ಕಾರು ಹಾಗೂ ದ್ವಿಚಕ್ರ ವಾಹನಗಳು ಪ್ರದರ್ಶನಗೊಳ್ಳಲಿವೆ. ಬೆಂಗಳೂರು, ದಾವಣಗೆರೆ, ಚಿತ್ರದುರ್ಗ, ತುಮಕೂರು ಸೇರಿದಂತೆ ರಾಜ್ಯದ ಪ್ರತಿಷ್ಠಿತ ಕಾರು ಹಾಗೂ ಬೈಕ್ ಕಂಪನಿಗಳು ಇದರಲ್ಲಿ ಪಾಲ್ಗೊಳ್ಳಲಿವೆ ಎಂದು ಮಾಹಿತಿ ನೀಡಿದರು.ಒಂದೇ ಸೂರಿನ ಅಡಿಯಲ್ಲಿ ವಿವಿಧ ಕಂಪನಿಯ ಕಾರು ಹಾಗೂ ಬೈಕ್ಗಳು ಪ್ರದರ್ಶನಗೊಳ್ಳುವುದರಿಂದ ವಾಹನ ಪ್ರಿಯರು, ಆಸಕ್ತರು ಭೇಟಿ ನೀಡಿ ವಾಹನಗಳ ವಿಶೇಷತೆ, ಸಾಲ ಸೌಲಭ್ಯ, ಬುಕ್ಕಿಂಗ್ ಕುರಿತಾಗಿಯೂ ಹೆಚ್ಚಿನ ಮಾಹಿತಿ ಪಡೆದುಕೊಳ್ಳಬಹುದು. ಕಂಪನಿಗಳು ಸ್ಥಳದಲ್ಲೇ ವಿಶೇಷ ರಿಯಾಯಿತಿ ನೀಡಿ ಬುಕ್ಕಿಂಗ್ ಕೂಡ ಮಾಡಿಕೊಳ್ಳುತ್ತವೆ. ಆಟೋ ಎಕ್ಸ್ ಪೋ ವಿಕ್ಷಣೆಗೆ ಮುಕ್ತ ಅವಕಾಶವಿದ್ದು, ದಾವಣಗೆರೆ ಸೇರಿದಂತೆ ಅಕ್ಕಪಕ್ಕದ ಜಿಲ್ಲೆಗಳಾದ ಚಿತ್ರದುರ್ಗ ಶಿವಮೊಗ್ಗ, ಹಾವೇರಿ, ವಿಜಯನಗರ, ಬಳ್ಳಾರಿಯಿಂದಲೂ ಸಾವಿರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸುವ ನಿರೀಕ್ಷೆ ಇದೆ ಎಂದರು. ಗಜೇಂದ್ರ ಟಾಟಾ ಶೋ ರೂಂ ಮಾಲೀಕರಾದ ಎ.ಕೆ. ಚನ್ನಪ್ಪ, ಚಿತ್ರದುರ್ಗದ ಶ್ರೀ ಮಾರುತಿ ಗ್ಯಾಸ್ ಸರ್ವೀಸ್ ನ ಎಸ್.ಪಿ.ಲೋಹಿತ್ ಪ್ರಸಾದ್, ರೋಟರಿ ಇಂಟರ್ನ್ಯಾಷನಲ್ 3160 ಜಿಲ್ಲಾ ಗೌವರ್ನರ್ ನಯನ್ ಎಸ್. ಪಾಟೀಲ್, ಹಿರಿಯೂರಿನ ಪ್ರೆಸಿಡೆಂನ್ಸಿ ಶಾಲೆಯ ಮುಖ್ಯಸ್ಥರಾದ ಬಿ.ಜೆ. ತಿಮ್ಮಾರೆಡ್ಡಿ, ಜಿಲ್ಲು ಬೈಕ್ಸ್ ನ ವ್ಯವಸ್ಥಾಪಕ ನಿರ್ದೇಶಕ ಆಂಥೋನಿ ರಾಜ್, ಅಮೃತಾ ಐ.ಎನ್.ಸಿ ಎಚ್.ಡಿ.ಶ್ರೀನಿವಾಸ್ ಸುದ್ದಿಗೋಷ್ಠಿಯಲ್ಲಿದ್ದರು..

## ಫಾಸ್ಟ್ ನ್ಯೂಸ್

### ಜ.07ರಂದು “ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ” ಕುರಿತು ತರಬೇತಿ

» ಚಿತ್ರದುರ್ಗ

ಹಿರಿಯೂರು ಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಇದೇ ಜನವರಿ 07ರಂದು ಬೆಳಿಗ್ಗೆ 10ಕ್ಕೆ ಜಿಲ್ಲೆಯ ರೈತರಿಗೆ “ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ” ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ತರಬೇತಿ ಕಾರ್ಯಕ್ರಮದಲ್ಲಿ ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ.ಎನ್.ಕುಮಾರ್, ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕ ಡಾ.ಸಿ.ತಿಪ್ಪೇಸ್ವಾಮಿ, ಪಶುಸಂಗೋಪನಾ ಇಲಾಖೆ ನಿವೃತ್ತ ಸಹಾಯಕ ನಿರ್ದೇಶಕ ಡಾ.ದೊಡ್ಡಮಲ್ಲಯ್ಯ, ಹಿರಿಯೂರು ಪಶುಆಸ್ಪತ್ರೆ ಮುಖ್ಯ ಪಶು ವೈದ್ಯಾಧಿಕಾರಿ ಡಾ.ನಾಗರಾಜ್ ಅವರು ಕುರಿ ಮತ್ತು ಉತ್ತಮ ತಳಿಗಳ ಆಯ್ಕೆ, ಕೊಟ್ಟಿಗೆ ಮತ್ತು ಮೇವಿನ ನಿರ್ವಹಣೆ ಹಾಗೂ ಅವುಗಳ ಆರೋಗ್ಯ ನಿರ್ವಹಣೆ ಕುರಿತು ವಿಷಯ ಮಂಡನೆ ಮಾಡುವರು.

ಆಸಕ್ತ ರೈತ ಭಾಂದವರು ತರಬೇತಿಯಲ್ಲಿ ಭಾಗವಹಿಸಲು ದೂರವಾಣಿ ಸಂಖ್ಯೆ 8277931058ಗೆ ಕರೆ ಮಾಡಿ ನೋಂದಾಯಿಸಿ ತರಬೇತಿಯ ಸದುಪಯೋಗ ಪಡೆಯಬಹುದು. ನೋಂದಾವಣಿ ಮಾಡಿಕೊಂಡ ರೈತಭಾಂದವರು ಫ್ರೂಟ್ಸ್ ಐಡಿ (ಎಫ್.ಐಡಿ) ಅಥವಾ ಚುನಾವಣೆ ಗುರುತಿನ ಚೀಟಿಯೊಂದಿಗೆ ತರಬೇತಿಗೆ ಹಾಜರಾಗಲು ವಿನಂತಿಸಿದೆ ಹಾಗೂ ಮೊದಲು ನೋಂದಾವಣಿ ಮಾಡಿಕೊಂಡ 50 ಜನ ರೈತಭಾಂದವರನ್ನು ತರಬೇತಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗುವುದು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ್ ತಿಳಿಸಿದ್ದಾರೆ.

### ವಿದ್ಯಾರ್ಥಿವೇತನಕ್ಕೆ ಇ-ಕೆವೈಸಿ ನೊಂದಣಿ ಕಡ್ಡಾಯ

» ಚಿತ್ರದುರ್ಗ

2024–25ನೇ ಸಾಲಿನಿಂದ ಕೇಂದ್ರ ಪುರಸ್ಕೃತ ವಿದ್ಯಾರ್ಥಿವೇತನ ಕಾರ್ಯಕ್ರಮಗಳಿಗೆ ಆಧಾರ್ ಬಯೋಮೆಟ್ರಿಕ್ ಅಥೆಂಟಿಕೇಷನ್ ಅಂಡ್ ಇ–ಕೆವೈಸಿ ಮಾಡಿಸುವುದು ಕಡ್ಡಾಯವಾಗಿದೆ. ಈ ಸಂಬಂಧರಾಜ್ಯಾದ್ಯಂತಕಾರ್ಯನಿರ್ವಹಿಸುತ್ತಿರುವ ಗ್ರಾಮ ಒನ್, ಬೆಂಗಳೂರು ಒನ್ ಹಾಗೂ ಕರ್ನಾಟಕ ಒನ್ ಕೇಂದ್ರಗಳಲ್ಲಿ ಈ ಪ್ರಕ್ರಿಯೆಯನ್ನು ಉಚಿತವಾಗಿ ಕೈಗೊಳ್ಳಲಾಗುವುದು. ಇದರೊಂದಿಗೆ ಸಮಾಜ ಕಲ್ಯಾಣ ಇಲಾಖೆ ಕಚೇರಿಗಳಲ್ಲಿಯೂ ಫೆಸಿಲಿಟೇಷನ್ ಕೇಂದ್ರಗಳನ್ನು ತೆರೆದು ಇ–ದೃಢೀಕರಣ ಪಡೆಯಲಾಗುತ್ತಿದೆ. ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿದ ನಂತರ ಕಡ್ಡಾಯವಾಗಿ ಇ–ಕೆವೈಸಿ ಧೃಡೀಕರಣ ನೊಂದಣಿ ಮಾಡಿಸಲು ಕೋರಿದೆ. ಇಲ್ಲದವಾದಲ್ಲಿ ಕೇಂದ್ರ ಸರ್ಕಾರದಿಂದ ಬರುವ ಶೇ.60 ರಷ್ಟು ವಿದ್ಯಾರ್ಥಿವೇತನ ಮಂಜೂರಾಗುವುದಿಲ್ಲ ಎಂದು ಹೊಳಲ್ಕೆರೆ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಹಕಾರಿ ಸಂಘ ಸಮಾಪನೆ: ಆಕ್ಷೇಪಣೆಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಕಾರ್ಯನಿರ್ವಹಿಸದೆ ಸ್ಥಗಿತಗೊಂಡಿರುವ ಚಿತ್ರದುರ್ಗದ ಗ್ರೇಟ್ ಫೋರ್ಟ್ ಅಲ್ಪಸಂಖ್ಯಾತರ ವಿವಿದೋದ್ದೇಶ ಸೌಹಾರ್ದ ಸಹಕಾರಿ ಸಂಘವನ್ನು, ಸಹಕಾರಿ ಅಧಿನಿಯಮ ಹಾಗೂ ಉಪನಿಯಮಗಳಂತೆ ಸಮಾಪನೆಗೊಳಿಸಲು, ರಾಜ್ಯ ಸೌಹಾರ್ದ ಸಂಯುಕ್ತ ವ್ಯವಸ್ಥಾಪಕ ನಿರ್ದೇಶಕರು ಸಮಾಪನಾಧಿಕಾರಿ ನೇಮಿಸಲು ತೀರ್ಮಾನಿಸಿದ್ದಾರೆ. ಇದಕ್ಕೆ ಸಾರ್ವಜನಿಕರಿಂದ ಆಕ್ಷೇಪಣೆ ಇದ್ದಲ್ಲಿ 15 ದಿನಗಳೊಳಗಾಗಿ ಚಿತ್ರದುರ್ಗ ಸಹಕಾರಿ ಸಂಘಗಳ ಉಪನಿಬಂಧಕರ ಕಚೇರಿಗೆ ಸಲ್ಲಿಸಲು ಪ್ರಕಟಣೆ ತಿಳಿಸಿದೆ.

### ಜ.03ರಂದು ಹಿರಿಯ ನಾಗರಿಕರಿಗೆ “ಉಚಿತ ನೇತ್ರ ತಪಾಸಣಾ ಶಿಬಿರ”

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಆರೋಗ್ಯ ಇಲಾಖೆ, ಜಿಲ್ಲಾ ಅಂಧತ್ವ ನಿಯಂತ್ರಣಾ ಕಾರ್ಯಕ್ರಮದ ವತಿಯಿಂದ ಇದೇ ಜ.03ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾ ಬಾಲಭವನ ಆವರಣದಲ್ಲಿ “ಹಿರಿಯ ನಾಗರಿಕರಿಗೆ “ಉಚಿತ ನೇತ್ರ ತಪಾಸಣಾ ಶಿಬಿರ” ಹಮ್ಮಿಕೊಳ್ಳಲಾಗಿದೆ. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಉದ್ಘಾಟನೆ ನೆರವೇರಿಸುವರು. ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಆರೋಗ್ಯಾಧಿಕಾರಿ ರೇಣುಪ್ರಸಾದ್, ಜಿಲ್ಲಾ ಅಂಧತ್ವನಿಯಂತ್ರಣಾಧಿಕಾರಿ ಡಾ.ನಾಗರಾಜ್, ತಾ.ಪಂ ಇಒ ವೈ.ರವಿಕುಮಾರ್ ಭಾಗವಹಿಸುವರು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ತಿಳಿಸಿದ್ದಾರೆ.

ಲಸಿಕಾ ಅಧಿವೇಶನ ತಾಯಂದಿರ ಸಭೆಯಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್ ಸಲಹೆ

# ಮಾರಕ ರೋಗಗಳ ವಿರುದ್ಧ ಲಸಿಕೆ ಕೊಡಿಸಿ

» ಚಿತ್ರದುರ್ಗ

ಎಲ್ಲ ತಾಯಂದಿರು ತಮ್ಮ ಮಕ್ಕಳಿಗೆ ತಪ್ಪದೇ 12 ಮಾರಕ ರೋಗಗಳ ವಿರುದ್ಧ ಲಸಿಕೆಗಳನ್ನು ಕೊಡಿಸಿ, ನಿಮ್ಮ ಮಕ್ಕಳನ್ನು ರಕ್ಷಿಸಿ ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್ ಸಲಹೆ ನೀಡಿದರು.

ನಗರದ ಚಳ್ಳಕೆರೆ ರಸ್ತೆಯ ವೆಂಕಟೇಶ್ವರ ಬಡಾವಣೆ ಅಂಗನವಾಡಿ ಕೇಂದ್ರದಲ್ಲಿ ಗುರುವಾರ ಲಸಿಕಾ ಅಧಿವೇಶನ ತಾಯಂದಿರ ಸಭೆಯಲ್ಲಿ ಅವರು ಮಾತನಾಡಿದರು.

ಪ್ರತಿ ತಿಂಗಳು ಅಂಗನವಾಡಿ ಕೇಂದ್ರದಲ್ಲಿ ಲಸಿಕೆ ನೀಡುವ ಕಾರ್ಯಕ್ರಮ ನಡೆಯುತ್ತದೆ. ಸರ್ಕಾರದಿಂದ ಉಚಿತವಾಗಿ ಲಸಿಕೆ ನೀಡಲಾಗುತ್ತದೆ. ಬುದ್ಧಿವಂತರಾಗಿ ನಿಮ್ಮ ಮಕ್ಕಳಿಗೆ ಸಂಪೂರ್ಣ ಲಸಿಕೆಗಳನ್ನು ಕೊಡಿಸಿ ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಮಾತನಾಡಿ, ಬಾಲ್ಯ ವಿವಾಹ ಮಾಡಬೇಡಿ. ಶಿಕ್ಷಣ ಮೊದಲು ನಂತರ ಮದುವೆ. ಬಾಲ್ಯ ವಿವಾಹ ನಿಷೇಧ ಕಾಯ್ದೆ ಬಹಳಷ್ಟು ಕಠಿಣವಾಗಿದೆ. ಬಾಲ್ಯ ವಿವಾಹ ಮಾಡುವುದು ಶಿಕ್ಷಾರ್ಹ ಅಪರಾಧ. ಹೆಣ್ಣು ಮಗುವನ್ನು ರಕ್ಷಿಸಿ ಹೆಣ್ಣು ಮಗುವನ್ನು ಓದಿಸಿ. ಬೇಟಿ ಬಚಾವೋ ಬೇಟಿ ಪಡಾವೋ ಬಾಲ್ಯ ವಿವಾಹಗಳನ್ನು ನಿಲ್ಲಿಸುವುದರಿಂದ ತಾಯಿ ಮರಣ ಶಿಶು ಮರಣ ಪ್ರಮಾಣ ತಗ್ಗಿಸಬಹುದು ಎಂದರು.



ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಕುಟುಂಬ ಕಲ್ಯಾಣ ವಿಧಾನಗಳನ್ನು ಅನುಸರಿಸುವಲ್ಲಿ ಪುರುಷರ ಸಹಭಾಗಿತ್ವ ಬಹಳ ಪ್ರಮುಖವಾಗಿದೆ. ಇಲಾಖೆಯು ಪುರುಷರಿಗಾಗಿ ಎನ್ ಎಸ್ ವಿ ಒಂದು ಸರಳ ಸುಲಭ ಹೊಲಿಗೆ ಹಾಕದಂತಹ ನೂತನ ಗರ್ಭ ನಿರೋಧಕ ಶಸ್ತ್ರಚಿಕಿತ್ಸಾ ವಿಧಾನವಾಗಿದೆ.ಈತಾಯಂದಿರಸಭೆಯಲ್ಲಿ ನಿಮ್ಮನ್ನು ಕೇಳಿಕೊಳ್ಳುವುದೇನೆಂದರೆ ಮನೆಯಲ್ಲಿ ಕುಟುಂಬದ ಎಲ್ಲಾ ಸದಸ್ಯರು ಕುಳಿತು ವಿಚಾರ ಮಾಡಿ ನಿಮ್ಮ ಮನೆಯ ಪುರುಷರಿಗೆ ಈ ವಿಧಾನ ಉಪಯೋಗ ಮಾಡಿಕೊಳ್ಳುವಂತೆ ಸೂಚಿಸಿ ಎಂದರು.

ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಕಾತ್ಯಾಯನಮ್ಮ ತಾಯಿ ಮಕ್ಕಳ ಪೌಷ್ಟಿಕ ಆಹಾರದ ಬಗ್ಗೆ ಸಭೆಯಲ್ಲಿ ಮಾಹಿತಿ ಶಿಕ್ಷಣ ನೀಡಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಜಾನಕಿ ಮಾತನಾಡಿ, ತಾಯಿ ಕಾರ್ಡಿನ ಮಹತ್ವ, ಮಕ್ಕಳಿಗೆ ತಗಲುವ ಯಾವ ಯಾವ ರೋಗಕ್ಕೆ ಯಾವ ಯಾವ ಲಸಿಕೆಯನ್ನು ನೀಡಲಾಗುತ್ತದೆ. ಬೆಳವಣಿಗೆ ಪಟ್ಟಿ ದಾಖಲಾತಿ ಬಗ್ಗೆ ಮಾಹಿತಿ ಶಿಕ್ಷಣ ನೀಡಿದರು. ತಾಲೂಕ್ ಆಶಾ ಬೋಧಕಿ ತಬಿತ ಅವರು ಎದೆ ಹಾಲಿನ ಮಹತ್ವದ ಬಗ್ಗೆ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಗೀತಾ, ಅಂಗನವಾಡಿ ಕಾರ್ಯಕರ್ತೆರಾದ ಆಶಾ ಮತ್ತು ರಂಗಮ್ಮ, ಆಶಾ ಕಾರ್ಯಕರ್ತೆಯರಾದ ರೇಣುಕಾ, ಅನುರಾಧ ತಾಯಂದಿರು, ಮಕ್ಕಳು, ಉಪಸ್ಥಿತರಿದ್ದರು.

## ಸುಕೋ ಬ್ಯಾಂಕ್ 2025ರ ಕ್ಯಾಲೆಂಡರ್ ಬಿಡುಗಡೆ

» ಚಿತ್ರದುರ್ಗ

ನಗರದ ತುರುವನೂರು ರಸ್ತೆಯ ಸುಕೋ ಸೌಹಾರ್ದ ಬ್ಯಾಂಕ್ ನಲ್ಲಿ ನೂತನ ವರ್ಷ 2025 ರ ಕ್ಯಾಲೆಂಡರ್ ರನ್ನು ಕ್ಲಸ್ಟರ್ ಮ್ಯಾನೇಜರ್ ನವೀನ್ ರಾಜ್ ಅವರು ಬಿಡುಗಡೆಗೊಳಿಸಿರು.

ಈ ಸಂದರ್ಭದಲ್ಲಿ ಮಾತನಾಡಿ ಸುಕೋ ಸೌಹಾರ್ದ ಬ್ಯಾಂಕ್ ಗ್ರಾಹಕರಿಗೆ ಉತ್ತಮ ಸೇವೆ ನೀಡುವ ನಿಟ್ಟಿನಲ್ಲಿ ಕೆಲಸ ನಿರ್ವಹಣೆ ಮಾಡುತ್ತಿದೆ. ಕೃಷಿ, ಉದ್ಯೋಗ, ಪಿಎಂಇಜಿಪಿ ಸೇರಿ ಹಲವು ರೀತಿಯಲ್ಲಿ ಗ್ರಾಹಕರಿಗೆ ಸಾಲ ಸೌಲಭ್ಯ ಒದಗಿಸಿ ಬದುಕು ಕಟ್ಟಿಕೊಳ್ಳಲು ಸಹಕಾರಿಯಾಗಿ ಹೊರಹೊಮ್ಮಿದೆ. ಚಿತ್ರದುರ್ಗದಲ್ಲಿ ಉತ್ತಮ ಸೇವೆ ಮೂಲಕ ಪ್ರಸಿದ್ಧಿ ಪಡೆದಿದೆ. ಸಂಜೆ 6 ಗಂಟೆವರೆಗೂ ಗ್ರಾಹಕರಿಗೆ ಸೇವೆ ನೀಡುವ ಏಕೈಕ ಬ್ಯಾಂಕ್ ಸುಕೋ ಬ್ಯಾಂಕ್ ಆಗಿದೆ. ಮುಂದಿನ ದಿನಗಳಲ್ಲಿ ಸಹ ಗ್ರಾಹಕ ಪರವಾದ ಸೇವೆಯ ಮೂಲಕ ಬ್ಯಾಂಕ್ ವ್ಯವಹಾರ ಹೆಚ್ಚಿಸಿಕೊಳ್ಳಲು ನಮ್ಮ ಹೆಜ್ಜೆ ಇಡುತ್ತಿದ್ದೇವೆ ಎಂದು ತಿಳಿಸಿದರು.



ಈ ಸಂದರ್ಭದಲ್ಲಿ ಸುಕೋ ಬ್ಯಾಂಕ್ ಶಾಖೆಯ ವ್ಯವಸ್ಥಾಪಕರಾದ ಸಿ. ಶೈಲಜಾ. ಸುಕೋ ಬ್ಯಾಂಕ್ ಗ್ರಾಹಕರಾದ ಚೂಡಮನಿ, ನಾಗರತ್ನ,ಮಾನಸ, ಶ್ರೀನಿವಾಸ್ ಶೆಟ್ಟಿ, ಶಿವುಕುಮಾರ್ , ಉಮೇಶ್ ರಾಮ ಮತ್ತು ಶಾಖೆಯ ಸಿಬ್ಬಂದಿಗಳಾದ ಶರಣಪ್ಪ ಕೋರಿ, ಶಿವಕುಮಾರ್ ನಾಡಿಗ್, ಯಶೋದ, ಪ್ರಾರ್ಥನ, ನಾಗರಾಜ್ ಉಪಸ್ಥಿತಿಯಲ್ಲಿದರು.

## ಉದ್ಯೋಗಸ್ಥ ಮಹಿಳೆಯರ ಹಾಗೂ ವಿದ್ಯಾರ್ಥಿನಿಯರ ವಸತಿ ನಿಲಯಕ್ಕೆ ಒಂದು ಲಕ್ಷ ರೂ.ಮಂಜೂರು



» ಚಿತ್ರದುರ್ಗ

ಮಠದ ಕುರುಬರಹಟ್ಟಿಯಲ್ಲಿರುವ ಬಸವೇಶ್ವರ ವಿದ್ಯಾಸಂಸ್ಥೆಯ ಹೇಮಾವತಿ ವಿಕಲಚೇತನ ಉದ್ಯೋಗಸ್ಥ ಮಹಿಳೆಯರ ಹಾಗೂ ವಿದ್ಯಾರ್ಥಿನಿಯರ ವಸತಿ ನಿಲಯಕ್ಕೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿಕೊಳ್ಳುವುದಕ್ಕಾಗಿ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರಹೆಗಡೆರವರು ಮಂಜೂರು ಮಾಡಿರುವ ಒಂದು ಲಕ್ಷ ರೂ.ಗಳ ಸಹಾಯ ಧನದ ಚೆಕ್‌ನ್ನು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಿರಿಗೆರೆ ವಲಯದ ಯೋಜನಾಧಿಕಾರಿ ರವಿಚಂದ್ರನ್ ಗುರುವಾರ ಸಂಸ್ಥೆಯ ಕಾರ್ಯದರ್ಶಿ ವಿ.ಕೆ.ಶಂಕರಪ್ಪನವರಿಗೆ ಹಸ್ತಾಂತರಿಸಿದರು.ಪ್ರಾದೇಶಿಕ ಯೋಜನಾಧಿಕಾರಿ ಮೌನೇಶ್, ಜ್ಞಾನವಿಕಾಸ ಸಮನ್ವಯಾಧಿಕಾರಿ ಶಿವಲೀಲಾ ಎಸ್.ಬಾಗೋಡಿ, ವಲಯ ಮೇಲ್ವಿಚಾರಕ ವಸಂತ, ಸರೋಜ, ಸಾಕಮ್ಮ, ಮಹೇಶ್‌ಶೇಖರ್, ಸೈಯದ್, ಮೋಹನ್, ಗಜಾನನ, ಕಿರಣ್, ಅಶೋಕ್, ರೇಖ ಇವರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಪ್ರತಿಯೊಬ್ಬ ವಿದ್ಯಾರ್ಥಿಯೂ ಗುಣಾತ್ಮಕ ಶಿಕ್ಷಣವನ್ನು ಪಡೆದು ಬದುಕನ್ನು ರೂಪಿಸಿಕೊಳ್ಳಿ: ನಾಗರಾಜ

» ಚಳ್ಳಕೆರೆ

ಗ್ರಾಮೀಣಭಾಗದಸರ್ಕಾರಿಪ್ರಾಥಮಿಕಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡಿ ಅವರ ಬದುಕನ್ನು ಹಸನುಮಾಡುವ ಜವಾಬ್ದಾರಿ ಶಿಕ್ಷಕರ ಮೇಲಿದೆ. ಶಿಕ್ಷಕರು ವಿದ್ಯಾರ್ಥಿಗಳನ್ನು ಸರಿದಾರಿಗೆ ತರುವ ಕೆಲಸವನ್ನು ನಿರಂತರ ಮಾಡಬೇಕೆಂದು ಬಸಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ನಾಗರಾಜ ತಿಳಿಸಿದರು.

ಅವರು, ಶಾಲಾ ಆವರಣದಲ್ಲಿ ಕಳೆದ ಸುಮಾರು ಐದು ವರ್ಷಗಳಿಂದ ಶಾಲೆಯಲ್ಲಿ ಸಹಶಿಕ್ಷಕರಾಗಿ ಕಾರ್ಯನಿರ್ವಹಿಸಿ ವರ್ಗಾವಣೆಯಾದ ಕೆ.ಎಂ.ಪುಷ್ಪಲತಾರವರ ಬೀಳ್ಕೊಡಿಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ವಿದ್ಯಾರ್ಥಿಗಳಿಗೆ ಶಿಕ್ಷಕರು ನೀಡುವ ಬೋಧನೆಯ ಮೇಲೆ ಹೆಚ್ಚು ಗಮನ ನೀಡುವ ಸ್ಥಿತಿಯನ್ನು ಶಿಕ್ಷಕರೇ ನಿರ್ಮಾಣ ಮಾಡಬೇಕು. ಮಕ್ಕಳ ಕಲಿಕೆ ವಿಚಾರದಲ್ಲಿ ಪ್ರತಿಯೊಬ್ಬ ಶಿಕ್ಷಕ ಹೆಚ್ಚು ಜವಾಬ್ದಾರಿಯನ್ನು ಹೊರಬೇಕು. ಒಟ್ಟಾರೆ ಶಿಕ್ಷಣ ಕ್ಷೇತ್ರದಲ್ಲಿ ವಿದ್ಯಾರ್ಥಿಗಳ ಕ್ರಿಯಾಶೀಲತೆ ಶಾಶ್ವತವಾಗಿರುವಂತೆ ನೋಡಿಕೊಳ್ಳಬೇಕು ಎಂದರು.



ಪ್ರಾಸ್ತಾವಿಕವಾಗಿ ಮಾತನಾಡಿದ ಮುಖ್ಯ ಶಿಕ್ಷಕಿ ಕವಿತಾ, ಪ್ರತಿಯೊಬ್ಬ ಶಿಕ್ಷಕರು ವರ್ಗಾವಣೆಯನ್ನು ಅನುಭವಿಸಬೇಕು. ಒಂದು ಶಾಲೆಯಿಂದ ಮತ್ತೊಂದು ಶಾಲೆಗೆ ಇಲಾಖೆ ವರ್ಗ ಮಾಡಿದಾಗ ಅನಿವಾರ್ಯವಾಗಿ ಬೇರೆ ಶಾಲೆಗೆ ತೆರಳಿ ಅಲ್ಲಿನ ಮಕ್ಕಳೊಂದಿಗೆ ಶೈಕ್ಷಣಿಕ ಅಭಿವೃದ್ಧಿಗೆ ಶ್ರಮಿಸಬೇಕು. ಇಂದು ವರ್ಗಾವಣೆಯಾಗಿ ಸನ್ಮಾನ ಪಡೆಯುತ್ತಿರುವ ಶಿಕ್ಷಕಿ ಕೆ.ಎಂ.ಪುಷ್ಪಲತಾ ಮಾದರಿ ಶಿಕ್ಷಕಿಯರಲ್ಲಿ ಒಬ್ಬರು ಎಂದು ಪ್ರಶಂಸಿಸಿದರು.

ಮಾಜಿ ಎಸ್‌ಡಿಎಂಸಿ ಅಧ್ಯಕ್ಷ ಡಿ.ಮಂಜಣ್ಣ, ಶಿಕ್ಷಕರಾದ ಮಲ್ಲೇಶ್, ಟಿ.ಸಿರಿಯಣ್ಣ, ಟಿ.ರಾಜು, ಟಿ.ಪ್ರದೀಪ್ ಮುಂತಾದವರು ಉಪಸ್ಥಿತರಿದ್ದರು.

## ವಿಶ್ವೇಶ್ವರಯ್ಯ ವಿದ್ಯಾ ಮಂದಿರಕ್ಕೆ ರಜತ ಮಹೋತ್ಸವ

» ಹಿರಿಯೂರು

ಹಿರಿಯೂರು ನಗರದ ತಾಲೂಕು ಕಚೇರಿ ಹಿಂಬಾಗ ಫುಡ್ ಪಾರ್ಕ್ ರಸ್ತೆಯಲ್ಲಿರುವ ಶ್ರೀ ಮೋಕ್ಷಗುಂಡಂ ವಿಶ್ವೇಶ್ವರಯ್ಯ ವಿದ್ಯಾ ಮಂದಿರವು ಇದೀಗ 25ನೇ ವರ್ಷಕ್ಕೆ ಕಾಲಿರಿಸಿದ್ದು ರಜತ ಮಹೋತ್ಸವ ಸಂಭ್ರಮದ ಆಚರಣೆಯಲ್ಲಿದೆ, ಇದೇ 4ರ ಶನಿವಾರ ಶಾಲೆಯಲ್ಲಿ ರಜತ ಮಹೋತ್ಸವ ಕಾರ್ಯಕ್ರಮ ಏರ್ಪಡಿಸಲಾಗಿದೆ. ಮೋಕ್ಷಗುಂಡಂ ವಿಶ್ವೇಶ್ವರಯ್ಯ ಎಂದಾಕ್ಷಣ ನೆನಪಿಗೆ ಬರುವುದು ವಿಶ್ವವಿಖ್ಯಾತ ಇಂಜಿನಿಯರ್ ಭಾರತರತ್ನ ಸರ್ ಎಂ ವಿಶ್ವೇಶ್ವರಯ್ಯನವರು. ಹಿರಿಯೂರಿನಲ್ಲಿ ನಿವೃತ್ತ ಕನ್ನಡ ಪರಿವೀಕ್ಷಕರಾಗಿದ್ದ ದಿವಂಗತ ಎಂ.ಎಸ್ ಸತ್ಯನಾರಾಯಣ ರಾವ್ ಇವರು ಈ ಸಂಸ್ಥೆಯನ್ನು ಆರಂಭಿಸಿದರು, 1999 ರಿಂದ 2007 ರವರೆಗೆ ಗಣೇಶ್ ಪ್ರಸಾದ್ ರವರು ಇದನ್ನು ನಡೆಸಿಕೊಂಡು ಬಂದರು. ನಂತರ ಉಪನ್ಯಾಸಕರಾಗಿದ್ದ ವೈ ಜಗದೀಶ್ ದರೆದಾರ್ ರವರು ನೂತನ ಆಡಳಿತ ಮಂಡಳಿಯೊಂದಿಗೆ ಶಾಲೆಯನ್ನು ಮುನ್ನಡೆಸುತ್ತಾ ಬಂದರು. ಆ ಸಂದರ್ಭದಲ್ಲಿ ಶಾಲಾ ಆಡಳಿತ ಮಂಡಳಿಯಲ್ಲಿ ಎಚ್.ಎಂ ಬಸವರಾಜ್ ಅಧ್ಯಕ್ಷರಾಗಿ, ಎಂ ಬಸವರಾಜಪ್ಪ ಕಾರ್ಯದರ್ಶಿಯಾಗಿ, ಬಿ.ವಿ ಸೂರ್ಯಪ್ರಕಾಶ್ ಖಜಾಂಚಿಯಾಗಿ, ಜಿ. ದೇವರಾಜ್, ವಿಜಯಕುಮಾರಿ, ಜಗದೀಶ್, ಜಯಲಕ್ಷ್ಮಿ, ಸಣ್ಣ ಭೀಮಣ್ಣ, ಹೇಮ ವೀರಭದ್ರಯ್ಯ ಇವರೆಲ್ಲರೂ ನಿರ್ದೇಶಕರಾಗಿ 2007 ರಿಂದ 2018ರ ವರೆಗೆ 10 ವರ್ಷಗಳ ಕಾಲ ಆಡಳಿತ ನಡೆಸಿದರು.2018 ರಿಂದ 2020 ರ ವರೆಗೆ ಜಗದೀಶ್ ದರೆದಾರ್ ಅಧ್ಯಕ್ಷರಾಗಿ, ದೇವರಾಜ್ ಉಪಾಧ್ಯಕ್ಷರಾಗಿ, ಕೆ ಆರ್ ವೀರಭದ್ರಯ್ಯ ಕಾರ್ಯದರ್ಶಿಯಾಗಿ, ಸಣ್ಣ ಬೀಮಣ್ಣ ಖಜಾಂಚಿಯಾಗಿ ಹೆಚ್.ಎಂ.ಬಸವರಾಜ್ , ಎಂ ಬಸವರಾಜಪ್ಪ ಬಿ.ವಿ. ಸೂರ್ಯಪ್ರಕಾಶ್ ಇವರು ನಿರ್ದೇಶಕರಾದರು,2020 ರಿಂದ 24ರ ವರೆಗೆ ಜಿ ದೇವರಾಜ್ ಅಧ್ಯಕ್ಷರಾಗಿ, ಎಂ ಬಸವರಾಜಪ್ಪ ಉಪಾಧ್ಯಕ್ಷರಾಗಿ ಕೆ ಆರ್ ವೀರಭದ್ರಯ್ಯ ಕಾರ್ಯದರ್ಶಿಯಾಗಿ ಹೆಚ್ ಎಂ ಬಸವರಾಜ್, ಬಿ.ವಿ ಸೂರ್ಯ ಪ್ರಕಾಶ್, ಶ್ರೀಹರ್ಷ ಜಗದೀಶ್ ಇವರು ನಿರ್ದೇಶಕರಾಗಿ ಆಯ್ಕೆಯಾಗಿದ್ದರು 2024 ರಿಂದ ಪುನಃ ಆಡಳಿತ ಮಂಡಳಿ ಬದಲಾವಣೆಯಾಗಿದ್ದು ಇದೀಗ ಎಂ ಬಸವರಾಜಪ್ಪನವರು ಅಧ್ಯಕ್ಷರಾಗಿರುತ್ತಾರೆ. ಬಿ ವಿ ಸೂರ್ಯ ಪ್ರಕಾಶ್ ಉಪಾಧ್ಯಕ್ಷರಾಗಿ ಹೆಚ್. ಎಂ ಬಸವರಾಜ್ ಕಾರ್ಯದರ್ಶಿಯಾಗಿ, ಸಣ್ಣ ಭೀಮಣ್ಣ ಖಜಾಂಚಿಯಾಗಿ ಕೆ.ಆರ್ ವೀರಭದ್ರಯ್ಯ, ಜಿ ದೇವರಾಜ್, ಶ್ರೀ ಹರ್ಷ ಜಗದೀಶ್ ಇವರು ನಿರ್ದೇಶಕರಾಗಿರುತ್ತಾರೆ. ಎಲ್ ಕೆ ಜಿ ಯಿಂದ 10ನೇ ತರಗತಿವರೆಗೆ ಆಂಗ್ಲ ಮಾಧ್ಯಮದಲ್ಲಿ ಶಾಲೆ ನಡೆಯುತ್ತಿದೆ, ಶಾಲೆಯು ಮೊದಲು ಸತ್ಯನಾರಾಯಣ ಸ್ವಾಮಿ ದೇವಸ್ಥಾನದ ಹಿಂಭಾಗ ಇತ್ತು 2013ರಲ್ಲಿ ಶಾಲೆಯು ಈಗ ಇರುವ ಕಟ್ಟಡಕ್ಕೆ ಬಂತು. ಶಾಲೆಯಲ್ಲಿ ವಾಹನ ಸೌಕರ್ಯ ಕಲ್ಪಿಸಲಾಗಿದೆ, ಆರಂಭದಲ್ಲಿ 180 ಜನ ವಿದ್ಯಾರ್ಥಿಗಳಿದ್ದು ಇದೀಗ 1056 ಜನ ವಿದ್ಯಾರ್ಥಿಗಳಿರುತ್ತಾರೆ. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗಿದೆ, ಸ್ಮಾರ್ಟ್ ಬೋರ್ಡ್ ಗಳನ್ನು ಬಳಸಲಾಗುತ್ತಿದೆ. ಕಂಪ್ಯೂಟರ್ ಲ್ಯಾಬ್ ಇರುತ್ತದೆ, ಪ್ರತಿ ವರ್ಷ ಮಕ್ಕಳಿಗೆ ಪ್ರವಾಸ ಕೈಗೊಳ್ಳಲಾಗುತ್ತದೆ. ವಿದ್ಯಾರ್ಥಿಗಳು ಹೊರ ಹೊಮ್ಮುತ್ತಿದ್ದು ಉತ್ತಮ ಅಂಕಗಳನ್ನು ಪಡೆದು ಶಾಲೆಗೆ ಕೀರ್ತಿ ತಂದಿರುತ್ತಾರೆ.



## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಅರ್ಜಿ

» ದಾವಣಗೆರೆ

ಪ್ರಸಕ್ತ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಾತಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆನ್‌ಲೈನ್ https://shp.karnataka.gov.in ನಲ್ಲಿ ಜನವರಿ 10 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಸಾಮಾನ್ಯ ಪದವಿ ಮಟ್ಟದ ಕೋರ್ಸು, ವೃತ್ತಿಪರ ಕೋರ್ಸು ಮತ್ತು ಸ್ನಾತಕೋತ್ತರ ಕೋರ್ಸಿನ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳ ವಿವರ : ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಕುಂದುವಾಡರಸ್ತೆ, ದಾವಣಗೆರೆ. 1 & 2, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ ವಿದ್ಯಾರ್ಥಿನಿಲಯ, ಶಿವಕುಮಾರ್ ಸ್ವಾಮಿ ಬಡಾವಣೆ, ದಾವಣಗೆರೆ 1 & 2, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ ವಿದ್ಯಾರ್ಥಿನಿಲಯ, ಗುತ್ತೂರು ಕಾಲೋನಿ, ಹರಿಹರ, ದಾವಣಗೆರೆ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಕೆರೆಬಿಳಚಿ, ದಾವಣಗೆರೆ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ ವಿದ್ಯಾರ್ಥಿನಿಲಯ, ಜಗಳೂರು ಟೌನ್, ದಾವಣಗೆರೆ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಎಂ.ಸಿ,ಸಿ ಬಿ ಬ್ಲಾಕ್, ದಾವಣಗೆರೆ. 1 & 2, ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ ವಿದ್ಯಾರ್ಥಿನಿಲಯ, ಕೆ.ಟಿ.ಜೆ ನಗರ, ದಾವಣಗೆರೆ 1 & 2 ಹೆಚ್ಚಿನ ಮಾಹಿತಿಗಾಗಿ ದೂ.ಸಂ :08192–250022 ದೂ: 08192–250066 ಸಂಪರ್ಕಿಸಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ಯುವಜನೋತ್ಸವ ಇಂದು ಜಾಥಾ

» ದಾವಣಗೆರೆ

ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜನವರಿ 5 ಮತ್ತು 6 ರಂದು ಎಂಬಿಎ ಮೈದಾನದಲ್ಲಿ ರಾಜ್ಯ ಮಟ್ಟದ ಯುವಜನೋತ್ಸವ ಏರ್ಪಡಿಸಲಾಗಿದ್ದು ಇದರ ಅಂಗವಾಗಿ ಜನವರಿ 3 ರಂದು ಬೆಳಗ್ಗೆ 7.30 ರಿಂದ ಗುಂಡಿ ವೃತ್ತದಿಂದ ವಿದ್ಯಾರ್ಥಿಭವನ, ಡಾ: ಬಿ.ಆರ್. ಅಂಬೇಡ್ಕರ್ ವೃತ್ತ, ಜಯದೇವ ವೃತ್ತ, ಪಾಲಿಕೆ ಮುಂಭಾಗದಿಂದ ಎವಿಕೆ ರಸ್ತೆಯ ಮೂಲಕ ಮೋತಿ ವೀರಪ್ಪ ಕಾಲೇಜಿನ ಆವರಣದವರೆಗೆ ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಂದ ಜಾಗೃತಿ ಜಾಥಾ ಕಾರ್ಯಕ್ರಮ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದ್ದಾರೆ.

## ಜ.6ಕ್ಕೆ ನಾಟಕ ಪ್ರದರ್ಶನ

» ಚಿತ್ರದುರ್ಗ

ವಸಂತ ಕಲಾ ನಾಟ್ಯ ಸಂಘ ದಾವಣಗೆರೆಯ ವೃತ್ತಿ ರಂಗಭೂಮಿ ಕಲಾವಿದೆ ಕಲ್ಪನಾ ನಾಕೋಡ್ ಇವರ ಸಹಾಯಾರ್ಥವಾಗಿ ರೈತ ಮುಖಂಡ ಕೆ.ಪಿ.ಭೂತಯ್ಯನವರ ಸಹಯೋಗದೊಂದಿಗೆ ದಿ.ಕೆ. ಎನ್.ಸಾಳಂಕಿ ಕೃತಿ ಕಿವುಡ ಮಾಡಿದ ಕಿತಾಪತಿ ಹಾಸ್ಯಭರಿತ ನಾಟಕ ಜ.6 ರಂದು ಸಂಜೆ ಆರು ಗಂಟೆಗೆ ತ.ರಾ.ಸು.ರಂಗಮಂದಿರದಲ್ಲಿ ಪ್ರದರ್ಶನಗೊಳ್ಳಲಿದೆ.





**ಭಾರತದ ಸ್ವಾತಂತ್ರ್ಯ ನಂತರ ಅತಿಹೆಚ್ಚು ಚರ್ಚಿತವಾಗುತ್ತಿರುವ ಎರಡು ವ್ಯಕ್ತಿಗಳು ಮತ್ತು ಶಕ್ತಿಗಳೆಂದರೆ ಮಹಾತ್ಮ ಗಾಂಧಿ ಮತ್ತು ಬಾಬಾ ಸಾಹೇಬ್ ಅಂಬೇಡ್ಕರ್.**

**ಗಾಂಧಿ ವಾದ ಮತ್ತು ಅಂಬೇಡ್ಕರ್ ವಾದ ವಿವಿಧ ಆಯಾಮಗಳನ್ನು ಪಡೆಯುತ್ತಾ, ಬೆಳೆಯುತ್ತಾ, ಘರ್ಷಣೆಗೆ ಒಳಪಡುತ್ತಾ, ವಿವಾದವಾಗುತ್ತಾ ಸಾಗುತ್ತಿದೆ.**

## ಗಾಂಧಿ ಮತ್ತು ಅಂಬೇಡ್ಕರ್ ....

- **ವಿರೋಧಿಗಳೇ ? ಸ್ನೇಹಿತರೇ ? ಭಿನ್ನ ಅಭಿಪ್ರಾಯದವರೇ ? ಸ್ವಾರ್ಥಿಗಳೇ ? ಆದರ್ಶಗಳೇ ?**
- **ಪ್ರಸ್ತುತರೇ - ಅಪ್ರಸ್ತುತರೇ ? ದೇಶದ ಹಿತಾಸಕ್ತಿಗೆ ಮಾರಕವೇ ಪೂರಕವೇ ? ಎಂಬ ಪ್ರಶ್ನೆಗಳ ಜೊತೆಗೆ....**



ಅವರನ್ನು ಹೇಗೆ ಅರ್ಥೈಸಿಕೊಳ್ಳುವುದು ?

ಎಷ್ಟು ಅಧ್ಯಯನ ಮಾಡಬೇಕು ? ಎಷ್ಟು ಚಿಂತನೆಗೆ ಒಳಪಡಬೇಕು ? ಎಷ್ಟು ಚರ್ಚಿಸಬೇಕು ? ಯಾವುದನ್ನು ಗ್ರಹಿಸಬೇಕು ? ಎಷ್ಟು ಅನುಭವ ಇರಬೇಕು ? ಯಾವ ಹಿನ್ನೆಲೆಯಲ್ಲಿ ಇದನ್ನು ಯೋಚಿಸಬೇಕು ? ಎಂಬುದು ಮುಖ್ಯವಾಗುತ್ತದೆ..

ಅದಕ್ಕಾಗಿ ಒಂದು ಸರಳ ಕ್ರಮ ಮತ್ತು ಮಾನಸಿಕ ಕಸರತ್ತು.......

ಅದಕ್ಕಾಗಿ ಕೆಲಹೊತ್ತು ಅಂಬೇಡ್ಕರ್ ಅವರನ್ನು ಸಂಪೂರ್ಣವಾಗಿ ಮರೆತು ಗಾಂಧಿಯವರ ಹುಟ್ಟೂರು ಪೋರ್ ಬಂದರ್ ಗೆ ಮಾನಸ್ಸಿನಲ್ಲೇ ಪ್ರಯಾಣಿಸಿ. ಗಾಂಧಿ ಹುಟ್ಟಿದ 1869, ಆ ಕಾಲದ ಸಾಮಾಜಿಕ ಸ್ಥಿತಿಗತಿಗಳು ಅದರ ಸುತ್ತಮುತ್ತಲಿನ ವಾತಾವರಣ ಗಮನಿಸಿ. ಅವರ ಓದು ಬ್ಯಾರಿಸ್ಟರ್ ಪದವಿ, ದಕ್ಷಿಣ ಆಫ್ರಿಕಾದ ಹೋರಾಟ, ಭಾರತಕ್ಕೆ ಆಗಮನ, ಸ್ವಾತಂತ್ರ್ಯ ಚಳುವಳಿ, ಕೊನೆಗೆ ಗುಂಡಿಗೆ ಬಲಿಯಾದ ಘಟನೆ ನೆನಪಿಸಿಕೊಳ್ಳಿ. ಸಾಧ್ಯವಾದರೆ ಅವರ ಆತ್ಮಕಥೆ " ಸತ್ಯದೊಂದಿಗೆ ನನ್ನ ಪ್ರಯೋಗ " ಓದಿ. ಉದ್ದೇಶಪೂರ್ವಕವಾಗಿ ಅವರನ್ನು ಪ್ರೀತಿಸಿ. ಅವರ ಆತ್ಮವನ್ನು ಸಹಜವಾಗಿ ಪ್ರವೇಶಿಸಿ. ಅವರ ನೆಲೆಯಲ್ಲಿ ನಿಂತು ಯೋಚಿಸಿ. ಆ ಪ್ರಬುದ್ಧತೆ ನಿಮಗಿದೆ.

ಅವರು ಆಗಿನ ಮೀಸಲಾತಿಯನ್ನು ವಿರೋಧಿಸಲು ಇರುವ ಕಾರಣ, ವರ್ಣಾಶ್ರಮ ಧರ್ಮ ಸಮರ್ಥಿಸಿದ ರೀತಿ, ನಂತರ ಅದನ್ನು ವಿರೋಧಿಸಿ ಬದಲಾಗಲು ಕಾರಣ, ಅವರ ಸರಳತೆ, ಸತ್ಯ, ಅಹಿಂಸೆ, ಸಂಘಟನೆ, ಪಾರದರ್ಶಕತೆ ಬಗ್ಗೆ ಗೌರವದಿಂದ ಅವಲೋಕಿಸಿ.

ಸ್ವಾತಂತ್ರ್ಯಹೋರಾಟಕ್ಕೆಸಿಕ್ಕಜಯಕ್ಕೆಅವರೆಷ್ಟುಕಾರಣ ಎಂದು ವಿಶಾಲ ಮನೋಭಾವದಿಂದ ವಿಮರ್ಶಿಸಿ. ಮಹಾತ್ಮನಾಗಿ ಅಲ್ಲದಿದ್ದರೂ ಸಾಮಾನ್ಯನಾಗಿ ಅವರ ಹೋರಾಟ ಎಷ್ಟು ಕಷ್ಟದ್ದಿರಬಹುದೆಂದು ನಿಮಗೆ ನಿಲುಕಿದಷ್ಟು ಗ್ರಹಿಸಿ ..

ಹಾಗೆಯೇ ಇತ್ತ ಕಡೆ ಗಾಂಧಿಯನ್ನು ಇಷ್ಟ ಪಡುವವರೆ ಕೆಲಹೊತ್ತು ಗಾಂಧಿಯನ್ನು ಮರೆತುಬಿಡಿ. ನೇರ ಅಂಬೇಡ್ಕರ್ ಹುಟ್ಟಿದ ಅಂಬೇವಾಡಿಗೆ ಮನಸ್ಸಿನಲ್ಲೇ ಪ್ರಯಾಣಿಸಿ. ಆಗಿನ ಜಾತಿ ವ್ಯವಸ್ಥೆಯಲ್ಲಿ ಮಹರ್ ಜನಾಂಗದ ಹೀನಾಯದ ಸ್ಥಿತಿ ಗಮನಿಸಿ. ಪ್ರಾಣಿಗಳಿಗಿಂತ ಹೀನಾಯವಾಗಿ ಕಾಣುತ್ತಿದ್ದ ಆಗಿನ ಕಾಲದ ಅಸ್ಪೃಶ್ಯರ ಬದುಕು ಗಮನಿಸಿ. ಆ ಸ್ಥಿತಿಯಿಂದಾಗಿ ಜಗತ್ತಿನ ಎಲ್ಲಾ ಧರ್ಮಗಳನ್ನು, ಗ್ರಂಥಗಳನ್ನು, ಸಂವಿಧಾನಗಳನ್ನು ಅರೆದು ಕುಡಿದು ಜೀರ್ಣಿಸಿಕೊಂಡ ಸಾಮಾನ್ಯನ ಜೀವನ ಕಲ್ಪಿಸಿಕೊಳ್ಳಿ.

ಆಗ ಅವರ ಅನುಭವಿಸಿದ ನೋವು ನಿಮಗಾಗಲಿ. ಅವರ ಕಾಲದ ಸಂದರ್ಭದಲ್ಲಿ ತನ್ನ ಜನಗಳಿಗಾಗಿ ಅವರ ಮಾಡಬಹುದಾದ ತ್ಯಾಗ, ಹೋರಾಟದ ಬಗ್ಗೆ ಅವರ ಆತ್ಮ ಪ್ರವೇಶಿಸಿ ನಿಮ್ಮನ್ನೇ ಪ್ರಶ್ನಿಸಿಕೊಳ್ಳಿ. ಅವರನ್ನು ನಿಮ್ಮವರೆಂದೇ ಪ್ರೀತಿಸಿ.

ಈಗ ಇಬ್ಬರಿಂದಲೂ ಹೊರಬಂದು ನಿಮ್ಮ ಇಂದಿನ ನೆಲೆಯಲ್ಲಿ, ಸಂಕೀರ್ಣವಾದ ಸಾಮಾಜಿಕ ಮತ್ತು ವೈಯಕ್ತಿಕ ಬದುಕಿನ ಹಿನ್ನೆಲೆಯಲ್ಲಿ ವಿಮರ್ಶಿಸಿ. ಯಾರಿಗೆ ಯಾವ ವಿಷಯ ಪ್ರಮುಖವಾಗಿತ್ತು ಮತ್ತು ಅದನ್ನು ಸಾಧಿಸಲು ಅವರಿಬ್ಬರೂ ಏನು ಮಾಡಿದರೆಂದು.

ಗಾಂಧಿಗೆ ದೇಶದ ಸ್ವಾತಂತ್ರ್ಯವೇ ಮುಖ್ಯವಾಗಿತ್ತು. ಬ್ರಿಟಿಷ್ ರನ್ನು ತೊಲಗಿಸಿ ನಂತರ ನಮ್ಮೊಳಗಿನ ಸಮಸ್ಯೆ ಮುಖ್ಯವಾಗಿ ಅಸ್ಪೃಶ್ಯತೆ ಮತ್ತು ಮೀಸಲಾತಿಯನ್ನು ಪರಿಹರಿಸಿಕೊಳ್ಳೋಣ. ಈ ಜನ ಹರಿಜನ ನನ್ನವರೇ, ಅವರನ್ನು ಬೇರೆ ಮಾಡುವುದು ಬೇಡ ಎಂಬ ಅತ್ಯಂತ ಆದರ್ಶ ಆಶಯ ಹೊಂದಿದ್ದರು. ಅದಕ್ಕಾಗಿ ತಮ್ಮೆಲ್ಲಾ ಶಕ್ತಿ, ಹೋರಾಟ, ಸಂಘಟನೆ, ಶ್ರಮವನ್ನು ಸ್ವಾತಂತ್ರ್ಯಕ್ಕಾಗಿ ಮೀಸಲಿಟ್ಟರು ಮತ್ತು ಅದೇ ಅವರ ಮುಖ್ಯ ಗುರಿಯಾಗಿತ್ತು.

ಆದರೆ ವಾಸ್ತವವಾದಿ, ಆದರ್ಶಕ್ಕಿಂತ ನೈಜ ಭಾರತೀಯ ಸಂಸ್ಕೃತಿಯ ಅರಿವಿದ್ದ ಅಂಬೇಡ್ಕರ್ ಅವರಿಗೆ ಗಾಂಧಿಯ ಆದರ್ಶ ಅವರಿಗೆ ಮಾತ್ರ ಸೀಮಿತ. ಸಾಮಾನ್ಯ ಜನ ಅವರ ಆದರ್ಶದ ಹತ್ತಿರಕ್ಕೂ ಸುಳಿಯದ ಶತಶತಮಾನಗಳ ಕ್ರೂರ ಜಾತಿ ವ್ಯವಸ್ಥೆಯಲ್ಲಿ ಮಲಿನಗೊಂಡ ಮನಸ್ಥಿತಿಗಳು ಎಂದು ಸ್ಪಷ್ಟವಾಗಿ ತಿಳಿದಿತ್ತು. ಅದಕ್ಕಾಗಿ ಅಂಬೇಡ್ಕರ್ ಪ್ರಾಮುಖ್ಯತೆ ಶೋಷಿತರ ಸ್ವಾತಂತ್ರ್ಯವಾಗಿತ್ತು. ಅದಿಲ್ಲದೆ ದೇಶದ ಸ್ವಾತಂತ್ರ್ಯ ನಿಷ್ಪ್ರಯೋಜಕ ಮತ್ತು ಅಪಾಯಕಾರಿ ಎಂಬ ಅರಿವಿತ್ತು. ಬ್ರಿಟಿಷರಿಗಿಂತ ಇಲ್ಲಿನ ಮೂಲಭೂತವಾದಿಗಳೇ ಅತ್ಯಂತ ಕ್ರೂರಿಗಳು ಎಂದು ಮನವರಿಕೆಯಾಗಿತ್ತು.

ಆ ಕಾರಣಕ್ಕಾಗಿ ಅವರು ಗಾಂಧಿಯನ್ನು ಗೌರವಿಸಿದರೂ ಕೆಲ ವಿಷಯಗಳಲ್ಲಿ ಉಗ್ರವಾಗಿ ವಿರೋಧಿಸಿದರು. ಅದು ಸರಿಯೂ ಆಗಿತ್ತು. ಒಂದು ವೇಳೆ ಗಾಂಧಿ ಅಂಬೇಡ್ಕರ್ ಅವರನ್ನು ವೈಯಕ್ತಿಕವಾಗಿ ವಿರೋಧಿಸಿದ್ದರೆ ಆಗ ಅವರಿಗಿದ್ದ ಪ್ರಭಾವ ಉಪಯೋಗಿಸಿ ಅಂಬೇಡ್ಕರ್ ಅವರಿಗೆ ಸಿಕ್ಕ ಸಂವಿಧಾನದ ಕರಡು ರಚನಾ ಸಮಿತಿಯ ಅಧ್ಯಕ್ಷತೆ ಅಥವಾ ಇತರ ಪ್ರಮುಖ ಸ್ಥಾನ ತಪ್ಪಿಸಬಹುದಿತ್ತು. ನೆಹರು ಅವರ ಬೆಂಬಲ ಅವರಿಗೆ ಇದ್ದೇ ಇತ್ತು. ಬಹುಶಃ ಗಾಂಧಿಯವರ ಉದ್ದೇಶ ಅದಿರಲಾರದು.

ನಾವು ಈಗ ಈ ಕ್ಷಣದಲ್ಲಿ ನಿಂತು ಅವರ ಸರಿ ತಪ್ಪುಗಳನ್ನು ಫಲಿತಾಂಶಗಳ ಆಧಾರದ ಮೇಲೆ ವಿಮರ್ಶಿಸಿ ತೀರ್ಪು ನೀಡುವುದು ಸತ್ಯದ ಒಂದು ಮುಖವಷ್ಟೇ ಆಗುತ್ತದೆ. ಇಬ್ಬರನ್ನೂ ಅವರು ಇದ್ದ ಹಾಗೆಯೇ ಸ್ವೀಕರಿಸಬೇಕು.

ಯಾರೂ ಪರಿಪೂರ್ಣರಲ್ಲ. ಇತಿಹಾಸದ ಅನೇಕ ನಿರ್ಧಾರಗಳು ಆ ಕಾಲಘಟ್ಟದಲ್ಲಿ ಸರಿ ಎನಿಸಿ ಕಾಲಾನಂತರದಲ್ಲಿ ತಪ್ಪು ಫಲಿತಾಂಶ ನೀಡಿರುವ ಅನೇಕ ಘಟನೆಗಳಿವೆ.

ಇಂದು ಅತ್ಯವಶ್ಯವಾಗಿರುವ, ಸಮಾನತೆಯ ಸಾಧನವಾಗಿರುವ ಕೆಲವು ಅಂಶಗಳು ಶತಮಾನಗಳ ನಂತರ ತಪ್ಪು ಎಂದು ಆಗಬಹುದು, ಭಾರತದ ವಿಭಜನೆಯ ಫಲಿತಾಂಶ ಕಾಲಕಾಲಕ್ಕೆ ಬದಲಾಗುತ್ತಿರಬಹುದು. ಇಂದಿನ ಹೀರೋ ನಾಳೆಯ ಖಳನಾಯಕನಾಗಬಹುದು,

.ಹೇಗೆ ಮನುವಾದ ಕೆಲಕಾಲ ಸಮಾಜವನ್ನು ಮುನ್ನಡೆಸಿ ಈಗ ಹೇಸಿಗೆ ಹುಟ್ಟಿಸುತ್ತಿದೆಯೋ, ದೇವರಿಗೆ ಸಮಾನರಂತಿದ್ದ ಪೂಜಾರಿಗಳು ಮುಲ್ಲಾಗಳು ಪಾದ್ರಿಗಳು ಈಗ ದಲ್ಲಾಳಿಗಳಂತೆಯೂ, ಜ್ಯೋತಿಷಿಗಳು ಬಫೂನ್ ಗಳಂತೆಯೂ, ಶೋಷಿತರು ಸ್ವಾಭಿಮಾನಿಗಳಂತೆಯೂ ಬಿಂಬಿತವಾಗುತ್ತಿಲ್ಲವೇ ಹಾಗೆ.

ಅದ್ದರಿಂದ ಇದು ದೇಶಕ್ಕೆ ಸ್ವಾತಂತ್ರ್ಯ ಕೊಡಿಸಲು ಶ್ರಮಿಸಿ, ವಿಶ್ವಕ್ಕೆ ಸರಳತೆ, ಅಹಿಂಸೆ, ಸತ್ಯ, ಪಾರದರ್ಶಕತೆ ನೀಡಿದ ಗಾಂಧಿ,

ಅದೇರೀತಿ ವ್ಯಕ್ತಿ ಸ್ವಾತಂತ್ರ್ಯವನ್ನು ಎತ್ತಿಹಿಡಿದು ಸಮಾನತೆ, ಮಾನವೀಯತೆಯನ್ನು ವಿಶ್ವಕ್ಕೆ ಪರಿಚಯಿಸಿದ, ಒಂದು ಇಡೀ ಜನಾಂಗವನ್ನು ತಲೆಎತ್ತಿ ಬದುಕುವಂತೆ ಮಾಡಿದ ಅಂಬೇಡ್ಕರ್ ಅವರನ್ನು ಎದುರು ಬದುರು ನಿಲ್ಲಿಸದೆ ಸಮಾನಾಂತರವಾಗಿ ನಿಲ್ಲಿಸೋಣ. ಕೆಲವರು, ಅದರಲ್ಲೂ ಕೆಲವು ಆಕ್ರೋಶಗೊಂಡ ದಲಿತ ಮನಸುಗಳು ಗಾಂಧಿಯನ್ನು ಕೊಂದ ಗೋಡ್ಸೆಯನ್ನು ಸಮರ್ಥಿಸುವುದು ಮೂಲಭೂತವಾದದ ಇನ್ನೊಂದು ಮುಖವಾಗುತ್ತದೆ. ಗಾಂಧಿಯವರ ವಿಶಾಲ ಮನೋಭಾವ ಪ್ರಾಯೋಗಿಕ ಅಲ್ಲದಿರಬಹುದು (ಮೀಸಲಾತಿಗೆ ಸಂಬಂಧಿಸಿದಂತೆ) ಅದಕ್ಕಾಗಿ ಅವರ ಒಳ್ಳೆಯ ಗುಣಗಳನ್ನು ದ್ವೇಷಿಸುವುದು ಸರಿಯಲ್ಲ. ನನ್ನ ಪ್ರಕಾರ ಇಬ್ಬರೂ ಮಹಾನ್ ವ್ಯಕ್ತಿಗಳು ಮತ್ತು ತಮ್ಮ ಗುರಿ ಸಾಧನೆಗಾಗಿ ಹೋರಾಡಿದ ಹಠವಾದಿಗಳು.

ಇದು ಚರ್ಚೆಯ ಒಂದು ಸರಳ ನಿರೂಪಣೆ ಅಷ್ಟೇ. ಹೇಳಲು ಇನ್ನೂ ಬಹಳಷ್ಟಿದೆ. ಚರ್ಚೆಗಳಿಗೆ ಮಿತಿಯಿಲ್ಲ. ಆದರೆ ಅನಿವಾರ್ಯವಾಗಿ ಇಂದಿನ ಪರಿಸ್ಥಿತಿಯನ್ನು ಗಮನಿಸಿ ಒಂದು ನಿರ್ಧಾರಕ್ಕೆ ಬರಬೇಕಾದ ಅನಿವಾರ್ಯತೆ ಇದೆ. ಇಲ್ಲದಿದ್ದರೆ ಘರ್ಷಣೆ ನಿರಂತರ.

ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಹುಟ್ಟುಹಬ್ಬದ ಶುಭಾಶಯಗಳೊಂದಿಗೆ.......

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ. ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ – ಮನೆಗಳಲ್ಲಿ –ಮತಗಳಲ್ಲಿ ಪರಿವರ್ತನೆಗಾಗಿ,ಮನಸ್ಸುಗಳ ಅಂತರಂಗದ ಚಳವಳಿ.



■ **ಲೇಖನ**
ವಿವೇಕಾನಂದ.
ಹೆಚ್.ಕೆ.
9844013068

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T